ಸಂಪುಟ : 10 ಸಂಚಿಕೆ: 273 ಪುಟ : 4+2 ಬೆಲೆ: 3.00 ಶನಿವಾರ ಡಿಸೆಂಬರ್ 13 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 273 Pages : 4+2 Price : 3.00 Saturday December 13 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## 'ಸಾಹಿತ್ಯ ಸಿಂಚನ' ಕಾರ್ಯಕ್ರಮ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ಕನ್ನಡ ಪುಸ್ತಕ ಪ್ರಾಧಿಕಾರ ಬೆಂಗಳೂರು ಇವರ ಸಹಯೋಗದಲ್ಲಿ ಡಿ. 13ರಂದು ಸಂಜೆ 6.30 ಗಂಟೆಗೆ ತೋಂಟದ ಸಿದ್ಧಲಿಂಗಶ್ರೀಗಳ ಕನ್ನಡ ಭವನ, ಕಸಾಪ ಕಾರ್ಯಾಲಯ ಗದಗ ಸಾಹಿತ್ಯ ಸಿಂಚನ ಮಾಲಿಕೆಯಲ್ಲಿ ಉಪನ್ಯಾಸ, ಕರಪತ್ರ ಬಿಡುಗಡೆ ಹಾಗೂ ಪ್ರಮಾಣಪತ್ರ ವಿತರಣಾ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಓದಿನ ಸುಖ ವಿಷಯವಾಗಿ ಕನ್ನಡ ಪುಸ್ತಕ ಪ್ರಾಧಿಕಾರದ ಅಧ್ಯಕ್ಷೆ ಡಾ. ಮಾನಸ ಉಪನ್ಯಾಸ ನೀಡುವರು. ಅಧ್ಯಕ್ಷತೆಯನ್ನು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ವಹಿಸುವರು. ಕನ್ನಡ ಪುಸ್ತಕ ಪ್ರಾಧಿಕಾರದ ಜಾಗೃತ ಸಮಿತಿ ಜಿಲ್ಲಾ ಸಂಚಾಲಕ, ಕವಿ ಎ.ಎಸ್. ಮಕಾನದಾರ ಉಪಸ್ಥಿತರಿರುವರು.

ಈ ಸಂದರ್ಭದಲ್ಲಿ ಕನ್ನಡ ಪುಸ್ತಕ ಪ್ರಾಧಿಕಾರದ ಮಹತ್ವದ ಯೋಜನೆಯಾದ 'ಮನೆಗೊಂದು ಗ್ರಂಥಾಲಯ'ದ ಕರಪತ್ರವನ್ನು ಬಿಡುಗಡೆಗೊಳಿಸಲಾಗುವದು. ಜಿಲ್ಲಾ ಜಾಗೃತ ಸಮಿತಿಗೆ ಆಯ್ಕೆಯಾದ ಸದಸ್ಯರಿಗೆ ಪ್ರಮಾಣಪತ್ರವನ್ನು ಪ್ರಾಧಿಕಾರ ಅಧ್ಯಕ್ಷರು ವಿತರಿಸುವರು. ಕಾರ್ಯಕ್ರಮದಲ್ಲಿ ಸಾಹಿತ್ಯಾಭಿಮಾನಿಗಳು, ಸಾಹಿತಿಗಳು, ಪರಿಷತ್ತಿನ ಸದಸ್ಯರು ಭಾಗವಹಿಸಬೇಕೆಂದು ಕಿಶೋರಬಾಬು ನಾಗರಕಟ್ಟಿ, ದತ್ತಪ್ರಸನ್ನ ಪಾಟೀಲ, ಡಿ.ಎಸ್. ಬಾಪುರಿ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

## ಇಂದು ಮಣಿಕಂಠ ಸನ್ನಿಧಾನದಲ್ಲಿ ಕಾರ್ತಿಕೋತ್ಸವ


■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಶ್ರೀ ಮಣಿಕಂಠ ಸನ್ನಿಧಾನ ಸೇವಾ ಸಮಿತಿ (ರಿ) ಭಾರತ ವೇರ್ ಹೌಸ್ ಬಳ್ಳಾನವರ ತೋಟದಲ್ಲಿ ಪ್ರತಿ ವರ್ಷದಂತೆ ಈ ವರ್ಷವೂ ಇಂದು ಶನಿವಾರ ದಿ. 13-12-2025 ರಂದು ಸಂಜೆ 7:30 ಗಂಟೆಗೆ ಅಯ್ಯಪ್ಪ ಸ್ವಾಮಿಯ ಕಾರ್ತಿಕೋತ್ಸವ ಹಮ್ಮಿಕೊಳ್ಳಲಾಗಿದೆ. ಮಣಿಕಂಠ ಸನ್ನಿಧಾನದ ಗುರುಸ್ವಾಮಿಗಳಾದ ವಿರೂಪಾಕ್ಷ ಗುರುಸ್ವಾಮಿಗಳು, ನಾಗರಾಜ ಗುರುಸ್ವಾಮಿಗಳು ನೇತೃತ್ವದಲ್ಲಿ ಕಾರ್ತಿಕೋತ್ಸವ ನಡೆಯಲಿದೆ.

ಕಾರಣ ಅಯ್ಯಪ್ಪ ಭಕ್ತರು ಪಾಲ್ಗೊಂಡು ಅಯ್ಯಪ್ಪ ಸ್ವಾಮಿ ಕೃಪೆಗೆ ಪಾತ್ರರಾಗಬೇಕೆಂದು ಆನಂದ ಕಂಬಳಿ ಗುರುಸ್ವಾಮಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಿಲ್ಲಾ ಉಸ್ತುವಾರಿ ಸಚಿವರ ಜಿಲ್ಲಾ ಪ್ರವಾಸ

■ ವಿಜಯಸಾಕ್ಷಿ ಸುದ್ದಿ, ಗದಗ



ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಅವರು ಡಿಸೆಂಬರ್ 13 ರಂದು ಗದಗ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದು, ವಿವರ ಈ ಕೆಳಗಿನಂತಿದೆ.

ಡಿಸೆಂಬರ್ 13 ರಂದು ಬೆಳಿಗ್ಗೆ 10 ಗಂಟೆಗೆ ನಾಗಾವಿಯ ಮಹಾತ್ಮಾ ಗಾಂಧಿ ಗ್ರಾ.ಪಂ. ರಾಜ್ ವಿಶ್ವವಿದ್ಯಾಲಯದಲ್ಲಿ ಅಖಿಲ ಭಾರತ ಪಂಚಾಯತ್ ಪರಿಷತ್‌ನ 18ನೇ ರಾಷ್ಟ್ರೀಯ ಸಮ್ಮೇಳನ ಕಾರ್ಯಕ್ರಮದಲ್ಲಿ ಭಾಗವಹಿಸುವರು. ಮಧ್ಯಾಹ್ನ 11.15 ಗಂಟೆಗೆ ಗದಗಿನಿಂದ ರಸ್ತೆ ಮೂಲಕ ಹೊರಟು ಮಧ್ಯಾಹ್ನ 12 ಗಂಟೆಗೆ ಲಕ್ಷ್ಮೇಶ್ವರಕ್ಕೆ ಆಗಮಿಸಿ ಲಕ್ಷ್ಮೇಶ್ವರದ ಚಂದನ ಸ್ಕೂಲ್‌ನಲ್ಲಿ ವಿಜ್ಞಾನ ವಿಸ್ತೃತ ಕಾರ್ಯಕ್ರಮ ಹಾಗೂ 2025ನೇ ಸಾಲಿನ ಪ್ರತಿಷ್ಠಿತ "ಚಂದನ ಶ್ರೀ" ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಭಾಗವಹಿಸುವರು. ಮಧ್ಯಾಹ್ನ 3 ಗಂಟೆಗೆ ಲಕ್ಷ್ಮೇಶ್ವರದಿಂದ ಹುಬ್ಬಳ್ಳಿಗೆ ಪ್ರಯಾಣ ಮಾಡುವರು ಎಂದು ಪ್ರಕಟಣೆ ತಿಳಿಸಿದೆ.

### ಗ್ರಾಮ ಸ್ವರಾಜ ವಿಕೇಂದ್ರೀಕರಣ, ಸ್ಥಳೀಯ ಆಡಳಿತದ ಚರ್ಚೆಗೆ ರಾಷ್ಟ್ರೀಯ ವೇದಿಕೆ

# 18ನೇ ರಾಷ್ಟ್ರೀಯ ಪಂಚಾಯತ್ ಪರಿಷತ್ ಸಮ್ಮೇಳನ

■ ವಿಜಯಸಾಕ್ಷಿ ಸುದ್ದಿ, ಗದಗ



ಗ್ರಾಮೀಣ ಜನತಾಂತ್ರಿಕ ವ್ಯವಸ್ಥೆಯ ಬೇರುಗಳನ್ನು ಇನ್ನಷ್ಟು ಬಲಪಡಿಸುವುದು ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ ಸಬಲೀಕರಣಕ್ಕೆ ಹೆಚ್ಚಿನ ಶಕ್ತಿಯನ್ನು ತುಂಬುವ ಉದ್ದೇಶದಿಂದ 18ನೇ ರಾಷ್ಟ್ರೀಯ ಪಂಚಾಯತ್ ಪರಿಷತ್ ಸಮ್ಮೇಳನವನ್ನು ಕರ್ನಾಟಕ ಪಂಚಾಯತ್ ರಾಜ್ ಪರಿಷತ್, ಬೆಂಗಳೂರು ಹಾಗೂ ವಿಶ್ವವಿದ್ಯಾಲಯದ ಸಹಭಾಗಿತ್ವದಲ್ಲಿ ಮತ್ತು ಕರ್ನಾಟಕ ಸರ್ಕಾರದ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಇಲಾಖೆಯ ಪ್ರಾಯೋಜಕತ್ವದಲ್ಲಿ, ಡಿಸೆಂಬರ್ 13 ಮತ್ತು 14ರಂದು ಗದಗ ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ವಿಶ್ವವಿದ್ಯಾಲಯದಲ್ಲಿ ಆಯೋಜಿಸಲಾಗಿದೆ ಎಂದು ಅಖಿಲ ಭಾರತ ಪಂಚಾಯತ್ ಪರಿಷತ್ ಅಧ್ಯಕ್ಷರು ಮತ್ತು ಮಾಜಿ ಕೇಂದ್ರ ಸಚಿವ ಸುಬೋಧ್ ಕಾಂತ್ ಸಾಹಾಯ್ ಹೇಳಿದರು.

ಅವರು ನಗರದ ಪತ್ರಿಕಾ ಭವನದಲ್ಲಿ ಶುಕ್ರವಾರ ಅಖಿಲ ಭಾರತ ಪಂಚಾಯತ್ ಪರಿಷತ್‌ನ 18ನೇ ರಾಷ್ಟ್ರೀಯ ಸಮ್ಮೇಳನ ಕುರಿತು ಏರ್ಪಡಿಸಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.

ಜನಸಾಮಾನ್ಯರ ನೇರ ಭಾಗವಹಿಸುವಿಕೆಯ ಆಶಯದಿಂದ ರೂಪಿಗೊಂಡ ಪಂಚಾಯತ್ ರಾಜ್ ವ್ಯವಸ್ಥೆಗೆ ರಾಷ್ಟ್ರಮಟ್ಟದಲ್ಲಿ ಮಾರ್ಗದರ್ಶನ ನೀಡುತ್ತಿರುವ ಅಖಿಲಭಾರತ ಪಂಚಾಯತ್ ಪರಿಷತ್ (AIPP) 1958ರಿಂದ ಪಂಚಾಯತ್ ಸಂಸ್ಥೆಗಳ ಬಲವರ್ಧನೆಗೆ ಸಕ್ರಿಯವಾಗಿ ಕಾರ್ಯನಿರ್ವಹಿಸುತ್ತಿದೆ. ಕರ್ನಾಟಕದಲ್ಲಿ ಪಂಚಾಯತ್ ಸಂಸ್ಥೆಗಳ ಬಲವರ್ಧನೆ, ವಿಕೇಂದ್ರೀಕೃತ ಆಡಳಿತ ಹಾಗೂ ಸ್ಥಳೀಯ ಸಂಸ್ಥೆಗಳ ಅಭಿವೃದ್ಧಿಗೆ ಕರ್ನಾಟಕ ಪಂಚಾಯತ್ ರಾಜ್ ಪರಿಷತ್ ನಿರಂತರ ಕೊಡುಗೆಯನ್ನು ನೀಡುತ್ತಿದ್ದು, ರಾಜ್ಯದ ಪಂಚಾಯತ್ ರಾಜ್ ವ್ಯವಸ್ಥೆಯನ್ನು ರಾಷ್ಟ್ರಮಟ್ಟದ ಮಾದರಿಯಾಗಿ ರೂಪಿಸಲು ಸಹಕಾರಿಯಾಗಿದೆ ಎಂದು ತಿಳಿಸಿದರು.

ಕರ್ನಾಟಕ ರಾಜ್ಯ ವಿಕೇಂದ್ರಿಕೃತ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯ ಉಪಾಧ್ಯಕ್ಷರಾದ ಡಿ.ಆರ್. ಪಾಟೀಲ ▶▶ 3ನೇ ಪುಟಕ್ಕೆ

> ಬಲವಂತರಾಯ್ ಮೇಹ್ತಾ ಸಮಿತಿಯು ಮೂರು ಹಂತದ ಪಂಚಾಯತ್ ರಾಜ್ ವ್ಯವಸ್ಥೆಗೆ ಮೂಲಭೂತ ರೂಪುರೇಷೆ ನೀಡಿದರೆ, ಅಶೋಕ್ ಮೇಹ್ತಾ ಮತ್ತು ಎಲ್.ಎಂ. ಸಿಂಗ್ವಿ ಸಮಿತಿಗಳು ಸಂಸ್ಥಾತ್ಮಕ ಸ್ವಾಯತ್ತತೆ ಮತ್ತು ಪ್ರಜಾಸತ್ತಾತ್ಮಕ ಸ್ಥಿರತೆಯ ದೃಢತೆಗೆ ಅಗತ್ಯವಾದ ಮಹತ್ವದ ಶಿಫಾರಸುಗಳನ್ನು ಮಾಡಿದವು. ಈ ಶಿಫಾರಸುಗಳ ಆಧಾರದಲ್ಲಿ ಪ್ರಧಾನಮಂತ್ರಿ ದಿ. ರಾಜೀವ್ ಗಾಂಧಿಯವರು ಪಂಚಾಯತ್ ರಾಜ್ ಸಂಸ್ಥೆಗಳಿಗೆ ಸಂವಿಧಾನಬದ್ಧ ಸ್ಥಾನಮಾನ ನೀಡುವ ಐತಿಹಾಸಿಕ ನಿರ್ಧಾರವನ್ನು ಕೈಗೊಂಡು, ಗ್ರಾಮಮಟ್ಟದ ಆಡಳಿತವನ್ನು ಭಾರತದ ಜನತಾಂತ್ರಿಕ ವ್ಯವಸ್ಥೆಯ ಆಧಾರಸ್ತಂಭವಾಗಿ ಬಲಪಡಿಸುವ ಅಡಿಪಾಯ ಹಾಕಿದರು.
>
> **- ಸುಬೋಧ್ ಕಾಂತ್ ಸಾಹಾಯ್.**
> ಅಖಿಲ ಭಾರತ ಪಂಚಾಯತ್ ಪರಿಷತ್ ಅಧ್ಯಕ್ಷರು.

> ಈ ಸಂದರ್ಭದಲ್ಲಿ ಕರ್ನಾಟಕ ಪಂಚಾಯತ್ ರಾಜ್ ಪರಿಷತ್ತಿನ ಕಾರ್ಯಕಾರಿ ಅಧ್ಯಕ್ಷ ವಿ.ವೈ. ಘೋರ್ಪಡೆ, ಉಪಾಧ್ಯಕ್ಷರಾದ ಸೌಭಾಗ್ಯ ಬಸವರಾಜ್ ಉಪಸ್ಥಿತರಿರುವರು. ಸಮ್ಮೇಳನದಲ್ಲಿ ರಾಜ್ಯ ಮತ್ತು ರಾಷ್ಟ್ರದ ವಿವಿಧ ಭಾಗಗಳಿಂದ 1500ಕ್ಕೂ ಹೆಚ್ಚು ಪಂಚಾಯತ್ ಪ್ರತಿನಿಧಿಗಳು, ಜಿಲ್ಲೆಗಳ ಸ್ಥಳೀಯ ಸಂಸ್ಥೆಗಳ ಪದಾಧಿಕಾರಿಗಳು, ವಿಷಯ ತಜ್ಞರು, ವಿಶ್ವವಿದ್ಯಾಲಯದ ಅಧ್ಯಾಪಕರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಲಿದ್ದಾರೆ ಎಂದು ಕುಲಪತಿ ಡಾ.ಸುರೇಶ ನಾಡಗೌಡ ತಿಳಿಸಿದರು.

### ಮಹಿಳಾ-ಮಕ್ಕಳ ಅಭಿವೃದ್ಧಿ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಜಿಲ್ಲಾಧಿಕಾರಿ ದಿವ್ಯ ಪ್ರಭು

# ಮಹಿಳೆಯರ ಸಮೃದ್ಧ ಜೀವನಕ್ಕೆ ಶ್ರಮಿಸಿ



■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಮಹಿಳೆಯರ ಮತ್ತು ಮಕ್ಕಳ ಸುರಕ್ಷತೆ ಹಾಗೂ ಜೀವನದ ಗುಣಮಟ್ಟ ಸುಧಾರಣೆಗೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ವಿವಿಧ ಇಲಾಖೆಗಳು ಅನೇಕ ರೀತಿಯ ಶೈಕ್ಷಣಿಕ, ಸಾಮಾಜಿಕ, ಆರ್ಥಿಕ ಕಲ್ಯಾಣ ಕಾರ್ಯಕ್ರಮಗಳನ್ನು ಜಾರಿಗೊಳಿಸಿದ್ದು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯು ಇತರ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸಿ, ಮಹಿಳೆಯರ ಸಮೃದ್ಧ ಜೀವನಕ್ಕೆ ಶ್ರಮಿಸಬೇಕೆಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಹೇಳಿದರು.

ಅವರು ಶುಕ್ರವಾರ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಜರುಗಿದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವಿವಿಧ ಕಾರ್ಯಕ್ರಮಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅಧಿಕಾರಿಗಳನ್ನು ಉದ್ದೇಶಿಸಿ ಮಾತನಾಡಿದರು.

ಸರಕಾರ ಮತ್ತು ನ್ಯಾಯಾಲಯ ನೀಡಿರುವ ಸೂಚನೆಯಂತೆ ಮಕ್ಕಳ ಕ್ಷೇತ್ರಗಳ ಕೆಲಸ ಮಾಡುವ ಎಲ್ಲ ಇಲಾಖೆಗಳು ಕೂಡಿ ನೂರು ದಿನಗಳ ಅರಿವು ಕಾರ್ಯಕ್ರಮಕ್ಕೆ ಕ್ರಿಯಾ ಯೋಜನೆ ರೂಪಿಸಿ, ಕ್ರಮ ವಹಿಸಬೇಕು. ಸಾರ್ವಜನಿಕರಲ್ಲಿ ಮಹಿಳೆ ಮತ್ತು ಮಕ್ಕಳ ಕುರಿತು ಅನುಷ್ಠಾನದಲ್ಲಿರುವ ಕಾಯ್ದೆ, ಕಾರ್ಯಕ್ರಮಗಳ ಕುರಿತು ಜಾಗೃತಿ ಮೂಡಿಸಲು ನೂರು ದಿನಗಳ ಅರಿವು ಕಾರ್ಯಕ್ರಮ ಸಹಾಯಕವಾಗಲಿದೆ ಎಂದು ಹೇಳಿದರು.

ಇಲಾಖೆಯಿಂದ ಹಮ್ಮಿಕೊಳ್ಳುವ ಜಾಗೃತಿ ಕಾರ್ಯಕ್ರಮಗಳನ್ನು ಕೇವಲ ಇಲಾಖೆಯ ಅನುಕೂಲಕ್ಕೆ ತಕ್ಕಂತೆ ನಡೆಸದೇ, ಹೆಚ್ಚು ಪ್ರಕರಣಗಳು ವರದಿಯಾಗುವ ನಿರ್ದಿಷ್ಟ ಪ್ರದೇಶಗಳಲ್ಲಿ ಅರಿವು ಕಾರ್ಯಕ್ರಮಗಳನ್ನು ಆಯೋಜಿಸುವಂತೆ ಜಿಲ್ಲಾಧಿಕಾರಿಗಳು ಹೇಳಿದರು.

ಬಾಲ್ಯವಿವಾಹ ತಡೆಗಟ್ಟುವುದು ಕೇವಲ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳ ಜವಾಬ್ದಾರಿ ಎಂದು ಭಾವಿಸಿ ಸುಮ್ಮನಿರಬಾರದು. ಬಾಲ್ಯವಿವಾಹ ನಡೆಯುತ್ತಿರುವ ಮಾಹಿತಿ ಯಾರಿಗೆ ಮೊದಲು ತಿಳಿಯುತ್ತದೆಯೋ, ಅವರು ತಕ್ಷಣವೇ ಕಾರ್ಯಪ್ರವೃತ್ತರಾಗಿ ಮದುವೆ ತಡೆಯಲು ಮುಂದಾಗಬೇಕು ಎಂದು ಜಿಲ್ಲಾಧಿಕಾರಿಗಳು ಹೇಳಿದರು.

ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿದ್ದ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಮಾತನಾಡಿ, ಮಹಿಳೆಯರ ಸುರಕ್ಷತೆ, ಭದ್ರತೆ ಮತ್ತು ಸಬಲೀಕರಣಕ್ಕಾಗಿ ಏಕೀಕೃತ ಯೋಜನೆ ಆಗಿರುವ ▶▶ 3ನೇ ಪುಟಕ್ಕೆ

> ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಹಿರಿಯ ಸಿವಿಲ್ ನ್ಯಾಯಾಧೀಶ ಪಿ.ಎಫ್. ದೊಡ್ಡಮನಿ ಮಾತನಾಡಿ, ಕಾನೂನು ಸೇವಾ ಪ್ರಾಧಿಕಾರವು ಮಹಿಳೆ ಮತ್ತು ಮಕ್ಕಳ ಸುರಕ್ಷತೆ ಮತ್ತು ಅಭಿವೃದ್ಧಿ ಕ್ಷೇತ್ರದಲ್ಲಿ ವಿಶೇಷವಾಗಿ ಕಾರ್ಯಮಾಡುತ್ತಿದೆ. ಇಲಾಖಾ ಸಿಬ್ಬಂದಿ ಮತ್ತು ಅಧಿಕಾರಿಗಳಲ್ಲಿ ಕಾನೂನು ಅರಿವು ಮೂಡಿಸಲು ಕಾರ್ಯಕ್ರಮ ಹಮ್ಮಿಕೊಳ್ಳುತ್ತಿದೆ. ಎಲ್ಲರೂ ಸಕ್ರಿಯವಾಗಿ ಭಾಗವಹಿಸಬೇಕು ಎಂದರು.

## ದಸ್ತು ಬರಹಗಾರರ ಪ್ರತಿಭಟನೆಗೆ ಬೆಂಬಲ



■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಶಿರಹಟ್ಟಿ ಪಟ್ಟಣದಲ್ಲಿ ಪ್ರಾರಂಭವಾಗಿರುವ ದಸ್ತು ಬರಹಗಾರರ ಅನಿರ್ದಿಷ್ಟ ಪ್ರತಿಭಟನಾ ಸ್ಥಳಕ್ಕೆ ಹಿಂದೂ ಸಂಘಟನೆಗಳ ಒಕ್ಕೂಟದ ಮುಖಂಡ ರಾಜು ಖಾನಪ್ಪನವರ ಸೇರಿದಂತೆ ವಿವಿಧ ಸಂಘಟನೆಗಳ ಪದಾಧಿಕಾರಿಗಳು ಆಗಮಿಸಿ ತಮ್ಮ ಬೆಂಬಲವನ್ನು ಸೂಚಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ರಾಜು ಖಾನಪ್ಪನವರ, ಹಲವು ವರ್ಷಗಳಿಂದ ದಸ್ತು ಬರಹಗಾರರು ಬಹಳ ಕಷ್ಟದಲ್ಲಿಯೇ ತಮ್ಮ ವೃತ್ತಿಯನ್ನು ಮಾಡಿಕೊಂಡು ಬರುತ್ತಿದ್ದಾರೆ. ಇತ್ತೀಚೆಗೆ ಸರಕಾರ ಡಿಜಟಲೀಕರಣದ ನೆಪದಲ್ಲಿ ದಸ್ತು ಬರಹಗಾರರ ಕುಟುಂಬಗಳು ಬೀದಿಗೆ ಬರುವಂತಹ ಕೆಲಸ ಮಾಡುತ್ತಿರುವುದು ವಿಷಾದನೀಯ. ಈ ಕೂಡಲೇ ಹೊರ ರಾಜ್ಯದಲ್ಲಿರುವಂತೆ ನಮ್ಮ ರಾಜ್ಯದಲ್ಲೂ ಸಹ ಪತ್ರ ಬರಹಗಾರರಿಗೆ ಪ್ರತ್ಯೇಕ ಲಾಗಿನ್ ನೀಡಬೇಕು, ನೋಂದಣಿ ಆಗುವ ಎಲ್ಲಾ ದಸ್ತಾವೇಜುಗಳಿಗೆ ಕಡ್ಡಾಯವಾಗಿ ಪತ್ರ ಬರಹಗಾರರ ಅಥವಾ ವಕೀಲ ಬಿಕ್ಕಲಂ ಕಡ್ಡಾಯಗೊಳಿಸಬೇಕು, ಪತ್ರ ಬರಹಗಾರರಿಗೆ ಗುರುತಿನ ಚೀಟಿಯನ್ನು ನೀಡಬೇಕು ಹಾಗೂ ದಸ್ತು ಬರಹಗಾರರಿಗೆ ಸೇವಾ ಭದ್ರತೆಯನ್ನು ಒದಗಿಸಬೇಕೆಂದು ಸಿಎಂ ಸಿದ್ದರಾಮಯ್ಯ ಹಾಗೂ ಕಂದಾಯ ಸಚಿವ ಕೃಷ್ಣ ಭೈರೇಗೌಡರಿಗೆ ಮನವಿ ಮೂಲಕ ಒತ್ತಾಯ ಮಾಡುತ್ತೇನೆ ಎಂದರು.

ಈ ಸಂದರ್ಭದಲ್ಲಿ ನಾಗರಾಜ ಲಕ್ಕುಂಡಿ, ಶಂಕರ ಮರಾಠೆ, ಫಕ್ಕೀರೇಶ ರಟ್ಟಿಹಳ್ಳಿ, ವಿಠ್ಠಲ ಬಿಢವೆ, ನಂದಾ ಪಲ್ಲೇದ, ಶಿವು ಲಮಾಣಿ, ಪರಶುರಾಮ ಡೊಂಕಬಳ್ಳಿ, ಸಂಘದ ತಾಲೂಕಾಧ್ಯಕ್ಷ ಅಶೋಕ ಹುಬ್ಬಳ್ಳಿ, ಉಪಾಧ್ಯಕ್ಷ ಶಿವಬಸಪ್ಪ ದಶಮನಿ, ನಜೀರ ಡಂಬಳ, ಶಂಕರ ಕೂಸ್ಲಾಪೂರ, ಮೋಹನ ಹೊಂಬಾಳಿ, ಮಂಜುನಾಥ ಮೆಣಸಿನಕಾಯಿ, ಮೈನು ಅತ್ತಾರ, ಪದ್ಮಾವತಿ ಹುಬ್ಬಳ್ಳಿ, ಸುಧಾ ಕೂಸ್ಲಾಪೂರ, ಮಂಜು ಹುಬ್ಬಳ್ಳಿ, ಚನ್ನಪ್ಪ ಕುರಿ, ಪವನ ಹುಬ್ಬಳ್ಳಿ, ಮಹಾದೇವಪ್ಪ ಪಲ್ಲೇದ, ಮಹಾದೇವಪ್ಪ ಹೊಂಬಾಳಿ ಮುಂತಾದವರು ಉಪಸ್ಥಿತರಿದ್ದರು.

## ಆನ್‌ಲೈನ್ ನಲ್ಲಿ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

2025-26ನೇ ಸಾಲಿನಲ್ಲಿ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಯೋಜನೆಗಳಾದ ಮಾಜಿ ದೇವದಾಸಿ ಮಹಿಳೆಯರ ಪುನರ್ವಸತಿ ಯೋಜನೆ, ಉದ್ಯೋಗಿನಿ ಯೋಜನೆ, ಚೇತನ ಯೋಜನೆ, ಧನಶ್ರೀ ಯೋಜನೆ ಮತ್ತು ಲಿಂಗತ್ವ ಅಲ್ಪಸಂಖ್ಯಾತರ ಪುನರ್ವಸತಿ ಯೋಜನೆಗಳಡಿ ಗ್ರಾಮ ಒನ್, ಕರ್ನಾಟಕ ಒನ್, ಬಾಪೂಜಿ ಸೇವಾ ಕೇಂದ್ರ, ಬೆಂಗಳೂರು ಒನ್, ಕೇಂದ್ರಗಳ ಮುಖಾಂತರ ಆನ್‌ಲೈನ್‌ನಲ್ಲಿ ಅರ್ಜಿಗಳನ್ನು ಆಹ್ವಾನಿಸಲಾಗುತ್ತದೆ.

ಧನಶ್ರೀ ಮತ್ತು ಲಿಂಗತ್ವ ಅಲ್ಪಸಂಖ್ಯಾತರ ಯೋಜನೆಯಡಿ ಆನ್‌ಲೈನ್ ಮತ್ತು ಆಫ್‌ಲೈನ್ ಎರಡರಲ್ಲೂ ಸಹ ಅರ್ಜಿ ಸಲ್ಲಿಸಲು ಅವಕಾಶ ನೀಡಲಾಗಿದೆ. ಆಫ್‌ಲೈನ್ ಅರ್ಜಿಗಳನ್ನು ಉಪ ನಿರ್ದೇಶಕರು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಗದಗ ಇವರ ಕಚೇರಿಗೆ ಅರ್ಜಿ ಸಲ್ಲಿಸಬಹುದಾಗಿದೆ.

ಮೇಲ್ಕಾಣಿಸಿದ ಯೋಜನೆಗಳಡಿ ಸಲ್ಲಿಸಬೇಕಾದ ಅಗತ್ಯ ದಾಖಲಾತಿಗಳು. ಆಧಾರ್ ಕಾರ್ಡ್, ಆಧಾರ್ ಸೀಡಿಂಗ್ ಆಗಿರುವ ಬ್ಯಾಂಕ್ ಖಾತೆ ಪುಸ್ತಕ, ಯೋಜನಾ ವರದಿ, ಜಾತಿ & ಆದಾಯ, ಚೇತನ ಮತ್ತು ಲಿಂಗತ್ವ ಅಲ್ಪಸಂಖ್ಯಾತರ ಯೋಜನೆಗಳಡಿ ಸಂಸ್ಥೆಯಲ್ಲಿ ನೋಂದಣಿಯಾಗಿರುವ ಪ್ರಮಾಣ ಪತ್ರ. ದೇವದಾಸಿ ಮಹಿಳೆಯರು 1993-94/2007-08 ರಲ್ಲಿ ಸರ್ಕಾರದಿಂದ ನಡೆಸಿದ ಸಮೀಕ್ಷೆಯಲ್ಲಿ ಪಡೆದ ಪ್ರಮಾಣ ಪತ್ರ. ವಯಸ್ಸಿನ ಮಿತಿ ಧನಶ್ರೀ ಯೋಜನೆ- 18-60 ವರ್ಷಗಳು, ಚೇತನ ಯೋಜನೆ- 18 ವರ್ಷ ಮೇಲ್ಪಟ್ಟು, ಉದ್ಯೋಗಿನಿ ಯೋಜನೆ- 18-55 ವರ್ಷ ಈ ಹಿಂದಿನ ಸಾಲಿನಲ್ಲಿ ಅರ್ಜಿ ಸಲ್ಲಿಸಿ ಸೌಲಭ್ಯ ಪಡೆಯದೆ ಇರುವವರು ಮತ್ತೊಮ್ಮೆ ಅರ್ಜಿ ಸಲ್ಲಿಸುವ ಅಗತ್ಯ ಇರುವದಿಲ್ಲ. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ; 15.01.2026 ರ ಸಂಜೆ 5:30 ಗಂಟೆವರೆಗೆ ಅವಕಾಶ ಕಲ್ಪಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಅಭಿವೃದ್ಧಿ ನಿರೀಕ್ಷಕರು, ಉಪ ನಿರ್ದೇಶಕರ ಕಚೇರಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾಡಳಿತ ಭವನ ರೂಮ್ ನಂ:-006 ಗದಗ. ಇವರನ್ನು ಸಂಪರ್ಕಿಸಬಹುದಾಗಿದೆ.

## ಸಿಎಂ ಆಗಮನಕ್ಕೆ ಸಕಲ ಸಿದ್ಧತೆ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಶನಿವಾರ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಪಟ್ಟಣದ ಸ್ಕೂಲ್ ಚಂದನಕ್ಕೆ ಆಗಮಿಸಲಿದ್ದು, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಅವರು ಸಿದ್ಧತೆಗಳನ್ನು ಪರಿಶೀಲಿಸಿದರು.

ಮುಖ್ಯಮಂತ್ರಿಗಳಿಗೆ ಹೆಲಿಪ್ಯಾಡ್‌ನಿಂದ ವೇದಿಕೆಗೆ ಆಗಮಿಸಲು ವಿಶೇಷ ವಾಹನ ವ್ಯವಸ್ಥೆ, ಪತ್ರಿಕಾಗೋಷ್ಠಿ, ಮನವಿ ಅರ್ಪಿಸುವ ಸ್ಥಳಗಳು, ವಾಹನ ನಿಲುಗಡೆ ಇತ್ಯಾದಿಗಳನ್ನು ಸರಿಯಾಗಿ ನಿರ್ವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಈಗಾಗಲೇ ಬೃಹತ್ ವೇದಿಕೆ ಸಿದ್ಧವಾಗಿದ್ದು, ಸುಮಾರು 3-4 ಸಾವಿರ ಆಸನಗಳ ವ್ಯವಸ್ಥೆ, ಗಣ್ಯರಿಗೆ ವಿಶೇಷ ಆಸನದ ವ್ಯವಸ್ಥೆ ಮಾಡಲಾಗಿದೆ ಎಂದರು.

ಬೆಳಿಗ್ಗೆ 11.15ಕ್ಕೆ ಲಕ್ಷ್ಮೇಶ್ವರಕ್ಕೆ ಆಗಮಿಸುವ ಸಿ.ಎಂ ಸಿದ್ದರಾಮಯ್ಯನವರು ಭಾರತ ರತ್ನ ಸಿಎನ್‌ಆರ್ ರಾವ್ ಅವರಿಂದ ನಡೆಯುವ 10ನೇ ವರ್ಷದ ರಾಷ್ಟ್ರೀಯ ವಿಜ್ಞಾನ ವಿಜ್ಞಾನ ವಿಸ್ತೃತ ಕಾರ್ಯಕ್ರಮ, ನಿವೃತ್ತ ಐಎಎಸ್ ಅಧಿಕಾರಿ ಬಿ.ಎಸ್. ಪಾಟೀಲ ಅವರಿಗೆ ಚಂದನ ಸಂಸ್ಥೆಯ ಪ್ರತಿಷ್ಠಿತ 'ಚಂದನ ಶ್ರೀ' ಪ್ರಶಸ್ತಿ ಪ್ರದಾನ ಮತ್ತು ಸಂಸ್ಥೆಯ ನಿರ್ದೇಶಕರಾಗಿದ್ದ ನಿವೃತ್ತ ಶಿಕ್ಷಕ ದಿ. ಎಚ್.ಸಿ. ರಟಗೇರಿ ಅವರ ಕಂಚಿನ ಮೂರ್ತಿ ಅನಾವರಣ ಕಾರ್ಯಕ್ರಮ ಉದ್ಘಾಟಿಸುವರು.

ಬಳಿಕ ವಿದ್ಯಾರ್ಥಿಗಳನ್ನುದ್ದೇಶಿಸಿ ಮಾತನಾಡಲಿದ್ದಾರೆ. ನಂತರ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಸಭೆ ಜರುಗಲಿದೆ. ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ, ಖನಿಜ ನಿಗಮದ ಅಧ್ಯಕ್ಷ, ಶಾಸಕ ಜಿ.ಎಸ್. ಪಾಟೀಲ, ಶಾಸಕ ಡಾ. ಚಂದ್ರು ಲಮಾಣಿ, ▶▶ 3ನೇ ಪುಟಕ್ಕೆ

## ಆಮದು ಸುಂಕ ಹೆಚ್ಚಿಸಿದ ಮೆಕ್ಸಿಕೊ: ಭಾರತದ ವಾಹನ-ಉಕ್ಕು ರಫ್ತಿನ ವೆಚ್ಚ ಹೆಚ್ಚಳ ಸಾಧ್ಯತೆ



■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಸ್ಥಳೀಯ ಕೈಗಾರಿಕೆಗಳನ್ನು ರಕ್ಷಿಸುವ ಗುರಿಯ ಭಾಗವಾಗಿ, ಭಾರತ, ಚೀನಾ ಮತ್ತು ದಕ್ಷಿಣ ಕೊರಿಯಾ ಸೇರಿದಂತೆ ಏಷ್ಯಾದ ದೇಶಗಳಿಂದ ಆಮದು ಮಾಡಿಕೊಳ್ಳುವ ವಸ್ತುಗಳ ಮೇಲಿನ ಹೆಚ್ಚಿನ ಸುಂಕ ಹೆಚ್ಚಳ ನಿರ್ಧಾರವನ್ನು ಮೆಕ್ಸಿಕೋ ಅನುಮೋದಿಸಿದೆ. ಮೆಕ್ಸಿಕನ್ ಸಂಸದರು ಗುರುವಾರ ಈ ಕ್ರಮವನ್ನು ಅಂಗೀಕರಿಸಿದರು.

ಆಟೋಮೊಬೈಲ್, ಆಟೋ ಭಾಗಗಳು, ಉಕ್ಕು, ಜವಳಿ, ಪ್ಲಾಸ್ಟಿಕ್‌ಗಳು ಮತ್ತು ಬಟ್ಟೆ ಸೇರಿದಂತೆ 1,400 ಕ್ಕೂ ಹೆಚ್ಚು ಉತ್ಪನ್ನಗಳ ಮೇಲೆ 5 ರಿಂದ 50 ಪ್ರತಿಶತದಷ್ಟು ಸುಂಕವನ್ನು ನಿಗದಿಪಡಿಸಿದರು. ಹೊಸ ಸುಂಕಗಳು 2026 ರಲ್ಲಿ ಜಾರಿಗೆ ಬರಲಿವೆ.

2026 ರಲ್ಲಿ ಯುಎಸ್-ಮೆಕ್ಸಿಕೋ-ಕೆನಡಾ ವ್ಯಾಪಾರ ಒಪ್ಪಂದದ ಪರಿಶೀಲನೆಗೆ ಮುಂಚಿತವಾಗಿ ಚೀನಾದಿಂದ ಆಮದುಗಳನ್ನು ನಿರ್ಬಂಧಿಸಲು ಮೆಕ್ಸಿಕೋ ಮೇಲೆ ಅಮೆರಿಕದ ಒತ್ತಡಕ್ಕೆ ಪ್ರತಿಕ್ರಿಯೆಯಾಗಿ ಈ ಕ್ರಮವನ್ನು ವ್ಯಾಪಕವಾಗಿ ನೋಡಲಾಗುತ್ತಿದೆ. ಸುಂಕಗಳು ಯಾವುದೇ ದೇಶವನ್ನು ಪ್ರತ್ಯೇಕಿಸುವ ಉದ್ದೇಶವನ್ನು ಹೊಂದಿಲ್ಲ ಎಂದು ಮೆಕ್ಸಿಕನ್ ಅಧ್ಯಕ್ಷೆ ಕ್ಲೌಡಿಯಾ ಶೀನ್‌ಬಾಮ್ ಹೇಳಿದ್ದಾರೆ. "ವಿಶ್ವದ ಯಾವುದೇ ದೇಶದೊಂದಿಗೆ ಸಂಘರ್ಷವನ್ನು ಉಂಟುಮಾಡುವುದು ನಮ್ಮ ಆಸಕ್ತಿಯಲ್ಲ" ಎಂದು ಅವರು ಹೇಳಿದರು.

ಈ ಕ್ರಮವು ಯುಎಸ್ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಚೀನಾ ಮತ್ತು ಇತರ ಏಷ್ಯಾದ ರಾಷ್ಟ್ರಗಳಿಂದ ಆಮದು ಮಾಡಿಕೊಳ್ಳುವ ಮೇಲೆ ಹೆಚ್ಚಿನ ಸುಂಕವನ್ನು ವಿಧಿಸುವ ವಿಧಾನವನ್ನು ಹೋಲುತ್ತದೆ ಎಂದು ವಿಶ್ಲೇಷಕರು ಗಮನಿಸುತ್ತಾರೆ.

**ಬೆಳಗಾವಿ ಸುವರ್ಣಸೌಧದಲ್ಲಿ ಡಿ.16ರಂದು ಅಕಾಡೆಮಿ ವಾರ್ಷಿಕ ಪ್ರಶಸ್ತಿಗಳ ಪ್ರದಾನ ಸಮಾರಂಭ**

# ಮಕ್ಕಳ ಏಳಿಗೆಗಾಗಿ ಬಾಲವಿಕಾಸ ಅಕಾಡೆಮಿ ಶ್ರಮಿಸುತ್ತಿದೆ


■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಕರ್ನಾಟಕ ಬಾಲವಿಕಾಸ ಅಕಾಡೆಮಿಯಿಂದ ಇದೇ ಪ್ರಥಮಬಾರಿಗೆ ಬೆಳಗಾವಿ ಸುವರ್ಣ ವಿಧಾನಸೌಧದಲ್ಲಿ ಅಕಾಡೆಮಿಯ ವಾರ್ಷಿಕ ಪ್ರಶಸ್ತಿಗಳ ಪ್ರದಾನ ಸಮಾರಂಭ ಹಮ್ಮಿಕೊಂಡಿದ್ದು, 2022-23 ಹಾಗೂ 2023-24ನೇ ಸಾಲಿನ ವಾರ್ಷಿಕ ಪ್ರಶಸ್ತಿಗಳನ್ನು ವಿತರಿಸಲಾಗುತ್ತಿದೆ. ಕರ್ನಾಟಕ ಬಾಲವಿಕಾಸ ಅಕಾಡೆಮಿಯು ರಾಜ್ಯದ ಸುಮಾರು 2 ಕೋಟಿ ಮಕ್ಕಳ ಶ್ರೇಯೋಭಿವೃದ್ಧಿಗಾಗಿ ನಿರಂತರ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ಶ್ರಮಿಸುತ್ತಿದೆ ಎಂದು ಅಕಾಡೆಮಿ ಅಧ್ಯಕ್ಷ ಸಂಗಮೇಶ ಬಬಲೇಶ್ವರ ಹೇಳಿದರು.

ಅವರು ಶುಕ್ರವಾರ ಜಿಲ್ಲಾ ಪಂಚಾಯಿತಿ ಕಾನ್ಫರೆನ್ಸ್ ಹಾಲ್‌ನಲ್ಲಿ ಕರ್ನಾಟಕ ಬಾಲವಿಕಾಸ ಅಕಾಡೆಮಿಯ ಗೌರವ ಪ್ರಶಸ್ತಿ, ಮಕ್ಕಳ ಚಂದಿರ ಪುಸ್ತಕ ಪ್ರಶಸ್ತಿ, ಬಾಲ ಗೌರವ ಪ್ರಶಸ್ತಿ ಹಾಗೂ ವಿಶೇಷ ಗೌರವ ಪ್ರಶಸ್ತಿ ವಿತರಣಾ ಸಮಾರಂಭದ ಕುರಿತು ಮತ್ತು ಅಕಾಡೆಮಿಯ ಯೋಜನೆಗಳ ಕುರಿತು ಪತ್ರಿಕಾಗೋಷ್ಠಿ ಜರುಗಿಸಿ ಮಾತನಾಡಿದರು.

ಕಳೆದ ಎರಡು ವರ್ಷಗಳಿಂದ ಪ್ರತಿಭಾವಂತ ಮಕ್ಕಳಿಗೆ ನೀಡುವ ಬಾಲ ಗೌರವ ಪ್ರಶಸ್ತಿ ಹಾಗೂ ವಿಶೇಷ ಗೌರವ ಪ್ರಶಸ್ತಿಗಳನ್ನು ವಿತರಿಸುವ ಸಮಾರಂಭವನ್ನು ಬೆಳಗಾವಿ ಸುವರ್ಣ ವಿಧಾನಸೌಧದಲ್ಲಿ ಹಮ್ಮಿಕೊಳ್ಳಲಾಗಿದೆ. ರಾಜ್ಯದ 34 ಶೈಕ್ಷಣಿಕ ಜಿಲ್ಲೆಗಳಿಂದ ಆಯ್ಕೆ ಮಾಡಿರುವ ಪ್ರಶಸ್ತಿ ಪುರಸ್ಕೃತರು ಆಗಮಿಸಲಿದ್ದಾರೆ ಎಂದು ವಿವರಿಸಿದರು.

ಈ ಪ್ರಶಸ್ತಿಗಳು ಮಕ್ಕಳ ಕ್ಷೇತ್ರದಲ್ಲಿ ಸಾಧನೆ ಮಾಡಿದ ಮಹನೀಯರಿಗೆ ಮತ್ತು ಪ್ರತಿಭಾವಂತ ಮಕ್ಕಳಿಗೆ ಪ್ರೇರಣೆಯಾಗಲಿವೆ. ಮಕ್ಕಳಲ್ಲಿನ ಸುಪ್ತ ಪ್ರತಿಭೆಯನ್ನು ಗುರುತಿಸಿ, ಅವರಿಗೆ ಸೂಕ್ತ ವೇದಿಕೆ ಕಲ್ಪಿಸುವುದು ಮತ್ತು ಮಕ್ಕಳ ಹಕ್ಕುಗಳ ರಕ್ಷಣೆ ನಮ್ಮ ಆದ್ಯತೆಯಾಗಿದೆ. ಮಕ್ಕಳನ್ನು ಗೌರವಿಸುವುದು ಮತ್ತು ಅವರನ್ನು ಪ್ರೋತ್ಸಾಹಿಸುವುದು ಅಕಾಡೆಮಿ ಅಧ್ಯಕ್ಷರಾಗಿ ನಮ್ಮ ಜವಾಬ್ದಾರಿ. ಈ ಪ್ರಶಸ್ತಿಗಳನ್ನು ಸಚಿವರ ಮೂಲಕವೇ ಕೊಡಿಸಬೇಕೆಂಬ ಮಹದಾಸೆಯಿಂದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅವರ ಹಾಗೂ ನಾಡಿನ ಗಣ್ಯಮಾನ್ಯರ ಉಪಸ್ಥಿತಿಯಲ್ಲಿ ಮಕ್ಕಳಿಗೆ ಪ್ರಶಸ್ತಿ ನೀಡಿ, ಗೌರವ ಸಲ್ಲಿಸಲಾಗುವುದು ಎಂದು ಹೇಳಿದರು.




ಇಂದಿನ ಬದಲಾದ ಜೀವನಶೈಲಿಯಲ್ಲಿ ಮಕ್ಕಳ ಮನಸ್ಥಿತಿಯನ್ನು ಅರ್ಥಮಾಡಿಕೊಳ್ಳಲು ಮತ್ತು ಅವರೊಂದಿಗೆ ಉತ್ತಮ ಬಾಂಧವ್ಯವನ್ನು ಬೆಳೆಸಿಕೊಳ್ಳಲು ಪಾಲಕರಿಗೆ ಮಾರ್ಗದರ್ಶನ ನೀಡುವ ಉದ್ದೇಶದಿಂದ, ರಾಜ್ಯದ ಎಲ್ಲಾ 31 ಜಿಲ್ಲೆಗಳಲ್ಲಿ ಪಾಲಕರಿಗೆ ವಿಶೇಷ ಕಾರ್ಯಾಗಾರಗಳನ್ನು ಹಮ್ಮಿಕೊಳ್ಳಲು ನಿರ್ಧರಿಸಲಾಗಿದೆ ಎಂದು ಹೇಳಿದರು.

ಬಾಲ ವಿಕಾಸ ಅಕಾಡೆಮಿಯಲ್ಲಿರುವ ಅವಕಾಶ ವಂಚಿತ ಮಕ್ಕಳನ್ನು ಗುರುತಿಸಿ, ಅವರನ್ನು ನಿಸರ್ಗದ ಮಡಿಲಿಗೆ ಕರೆತರುವ ನಿಟ್ಟಿನಲ್ಲಿ ಬಾಲವಿಕಾಸ ಅಕಾಡೆಮಿ ಮಹತ್ವದ ಹೆಜ್ಜೆಯನ್ನಿಟ್ಟಿದೆ.

15 ದಿನಗಳವರೆಗೆ ಅವರ ವ್ಯಕ್ತಿತ್ವ ವಿಕಸನ ಕಾರ್ಯಾಗಾರ ನಡೆಸುವ ಮೂಲಕ ರಾಜ್ಯದಲ್ಲಿನ 10 ಜನರ, ಮೂರು ತಂಡಗಳನ್ನಾಗಿಸಿ ಮಕ್ಕಳಿಗೆ ಹೊಸ ಆತ್ಮವಿಶ್ವಾಸ ತರುವ ಉದ್ದೇಶದಿಂದ ಸಾಧನೆ ಮಾಡಲು ಪ್ರೇರೇಪಿಸುತ್ತದೆ.

ಸಾಧಕರನ್ನು ಕರೆದು, ವಿದ್ಯಾರ್ಥಿಗಳಿಗೆ ಪ್ರೇರಣೆ ನೀಡುವ ಪ್ರಯತ್ನ ಬಾಲವಿಕಾಸ ಅಕಾಡೆಮಿ ಮಾಡುತ್ತಿದೆ ಎಂದು ಸಂಗಮೇಶ ಬಬಲೇಶ್ವರ ವಿವರಿಸಿದರು.

ಧಾರವಾಡ ಬಾಲ ವಿಕಾಸ ಅಕಾಡೆಮಿ ವತಿಯಿಂದ ಕೊಡ ಮಾಡುವ ಅಕಾಡೆಮಿ ಗೌರವ ಪ್ರಶಸ್ತಿಗೆ ಆಯ್ಕೆಯಾದ ಸಾಹಿತಿ, ಲೇಖಕರು, ಸಂಘ-ಸಂಸ್ಥೆಗಳಿಗೆ 25 ಸಾವಿರ ರೂ ನಗದು ಬಹುಮಾನ, ಮಕ್ಕಳ ಚಂದಿರ ಪ್ರಶಸ್ತಿಗೆ ಆಯ್ಕೆಯಾದ ಲೇಖಕರಿಗೆ 15 ಸಾವಿರ ನಗದು ಬಹುಮಾನ ಹಾಗೂ ಅಕಾಡೆಮಿ ಬಾಲ ಗೌರವ ಪ್ರಶಸ್ತಿಗೆ ಆಯ್ಕೆಯಾದ ಮಕ್ಕಳಿಗೆ 10 ಸಾವಿರ ರೂ ನಗದು ಬಹುಮಾನ, ವಿಶೇಷ ಗೌರವ ಪ್ರಶಸ್ತಿ ಪುರಸ್ಕೃತರಿಗೆ 10 ಸಾವಿರ ರೂ ನಗದು ಬಹುಮಾನವನ್ನು ವಿತರಿಸಿ ಗೌರವಿಸಲಾಗುತ್ತದೆ ಎಂದು ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಕರ್ನಾಟಕ ಬಾಲವಿಕಾಸ ಅಕಾಡೆಮಿ ಯೋಜನಾಧಿಕಾರಿ ಅಕ್ಕಮಹಾದೇವಿ, ವಿಶೇಷ ಕರ್ತವ್ಯ ಅಧಿಕಾರಿ ಅನ್ನಪೂರ್ಣ ಸಂಗಳದ ಹಾಗೂ ಇತರರು ಇದ್ದರು.

## ಇಂಡಿಗೋ ಬಿಕ್ಕಟ್ಟು: ನಾಲ್ವರು ವಿಮಾನ ಕಾರ್ಯಾಚರಣೆಯ ಇನ್ ಸ್ಪೆಕ್ಟರ್ ಗಳ ಅಮಾನತು

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಇಂಡಿಗೋ ವಿಮಾನದ ಕಾರ್ಯಾಚರಣೆಯಲ್ಲಿ ಉಂಟಾದ ಪ್ರಮುಖ ಅಡಚಣೆಗಳಿಂದಾಗಿ ಸಾವಿರಾರು ಪ್ರಯಾಣಿಕರು ಸಂಕಷ್ಟಕ್ಕೆ ಸಿಲುಕಿ ಸಾವಿರಾರು ವಿಮಾನಗಳ ಹಾರಾಟ ರದ್ದತಿಗೆ ಕಾರಣವಾದ ಹಿನ್ನೆಲೆಯಲ್ಲಿ ನಾಗರಿಕ ವಿಮಾನಯಾನ ಮಹಾ ನಿರ್ದೇಶನಾಲಯ ನಾಲ್ವರು ವಿಮಾನ ಕಾರ್ಯಾಚರಣೆಯ ಇನ್ ಸ್ಪೆಕ್ಟರ್ ಗಳನ್ನು (ಎಫ್‌ಒಐ) ಅಮಾನತುಗೊಳಿಸಿದೆ.

ವಿಮಾನ ಕಾರ್ಯಾಚರಣೆಯ ಇನ್ ಸ್ಪೆಕ್ಟರ್‌ಗಳು ನಾಗರಿಕ ವಿಮಾನಯಾನ ನಿರ್ದೇಶನಾಲಯದೊಳಗಿನ ಹಿರಿಯ ಅಧಿಕಾರಿಗಳಾಗಿದ್ದು, ನಿಯಂತ್ರಕ ಮತ್ತು ಸುರಕ್ಷತಾ ಮೇಲ್ವಿಚಾರಣೆಗೆ ಜವಾಬ್ದಾರರಾಗಿರುತ್ತಾರೆ. ವಿಮಾನಯಾನ ಕಾರ್ಯಾಚರಣೆಗಳನ್ನು ಮೇಲ್ವಿಚಾರಣೆ ಮಾಡಲು ಮತ್ತು ವಾಯುಯಾನ ಮಾನದಂಡಗಳ ಅನುಸರಣೆಯನ್ನು ಖಚಿತಪಡಿಸಿಕೊಳ್ಳಲು ಅವರನ್ನು ನಿಯೋಜಿಸಲಾಗಿರುತ್ತದೆ.

ಪೈಲಟ್‌ಗಳು ಮತ್ತು ಕ್ಯಾಬಿನ್ ಸಿಬ್ಬಂದಿ ಸೇರಿದಂತೆ ವಿಮಾನಯಾನ ಸಂಸ್ಥೆಗಳು ಮತ್ತು ವಾಯುಯಾನ ಸಿಬ್ಬಂದಿಗೆ ತಪಾಸಣೆ, ಲೆಕ್ಕಪರಿಶೋಧನೆ ಮತ್ತು ಪ್ರಮಾಣೀಕರಣ ಪ್ರಕ್ರಿಯೆಗಳನ್ನು ನಡೆಸುವ ಮೂಲಕ ವಾಯುಯಾನ ಸುರಕ್ಷತೆಯನ್ನು ಕಾಪಾಡುವಲ್ಲಿ ವಿಮಾನ ಕಾರ್ಯಾಚರಣೆಯ ಇನ್ ಸ್ಪೆಕ್ಟರ್‌ಗಳು ನಿರ್ಣಾಯಕ ಪಾತ್ರ ವಹಿಸುತ್ತಾರೆ. ನಿಯಂತ್ರಕ ಅನುಸರಣೆಯನ್ನು ಪರಿಶೀಲಿಸುವುದು, ತರಬೇತಿ ಮತ್ತು ಹಾರಾಟದ ಮಾನದಂಡಗಳನ್ನು ಮೇಲ್ವಿಚಾರಣೆ ಮಾಡುವುದು ಮತ್ತು ಭಾರತದಾದ್ಯಂತ ಅಪಘಾತ ತಡೆಗಟ್ಟುವ ಪ್ರಯತ್ನಗಳಿಗೆ ಕೊಡುಗೆ ನೀಡುವುದು ಅವರ ಕರ್ತವ್ಯಗಳಲ್ಲಿ ಸೇರಿವೆ. "ಇಂಡಿಗೋ ಡಿಸೆಂಬರ್ 12, ಶುಕ್ರವಾರ ಬೆಂಗಳೂರು ವಿಮಾನ ನಿಲ್ದಾಣದಿಂದ 54 ವಿಮಾನಗಳನ್ನು ರದ್ದುಗೊಳಿಸಿದೆ -ಇವುಗಳಲ್ಲಿ 31 ಆಗಮನ ಮತ್ತು 23 ನಿರ್ಗಮನಗಳು" ಎಂದು ಮೂಲಗಳು ತಿಳಿಸಿವೆ.

## ಅಲ್ಪಸಂಖ್ಯಾತ ಶಾಲೆಗಳಿಗೆ ಆರ್.ಟಿ.ಇ ಕಾಯ್ದೆಯಿಂದ ವಿನಾಯಿತಿ ತೀರ್ಪಿನ ವಿರುದ್ಧ ಅರ್ಜಿ; ಎನ್.ಜಿ.ಒಗೆ ದಂಡ ವಿಧಿಸಿದ ಸುಪ್ರೀಂ

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಶಿಕ್ಷಣ ಹಕ್ಕು ಕಾಯ್ದೆಯ (ಆರ್‌ಟಿಇ) ನಿಬಂಧನೆಗಳಿಂದ ಅಲ್ಪಸಂಖ್ಯಾತ ಶಾಲೆಗಳಿಗೆ ವಿನಾಯಿತಿ ನೀಡಿದ್ದ, ತನ್ನ ಹಿಂದಿನ ತೀರ್ಪನ್ನು ಪ್ರಶ್ನಿಸಿ ಸಲ್ಲಿಸಲಾದ ರಿಟ್ ಅರ್ಜಿಯನ್ನು ಸುಪ್ರೀಂ ಕೋರ್ಟ್ ಶುಕ್ರವಾರ ತೀವ್ರವಾಗಿ ಖಂಡಿಸಿದೆ.

ಜಸ್ಟೀಸ್ ಬಿ.ವಿ. ನಾಗರತ್ನ ಮತ್ತು ನ್ಯಾಯಮೂರ್ತಿ ಆರ್. ಮಹಾದೇವನ್ ಅವರ ಪೀಠ, 'ಇದು ದೇಶದ ನ್ಯಾಯಾಂಗ ವ್ಯವಸ್ಥೆಯನ್ನೇ ದುರ್ಬಲಗೊಳಿಸುವ ಯತ್ನ' ಎಂದು ಹೇಳಿದೆ.

ನೀವು ಸುಪ್ರೀಂ ಕೋರ್ಟ್ ಜೊತೆ ಈ ರೀತಿ ವರ್ತಿಸುವುದಕ್ಕೆ ಸಾಧ್ಯ ಇಲ್ಲ, ನಾವು ಕೋಪಗೊಂಡಿದ್ದೇವೆ. ಇದು ಈ ದೇಶದ ಇಡೀ ನ್ಯಾಯಾಂಗ ವ್ಯವಸ್ಥೆಗೆ ವಿರುದ್ಧವಾಗಿದೆ. ಈ ಪ್ರಕರಣದ ಗಂಭೀರತೆ ನಿಮಗೆ ತಿಳಿದಿಲ್ಲ. ನಾವು ನಿಮ್ಮನ್ನು ಒಂದು ಲಕ್ಷ ರೂಪಾಯಿ ವೆಚ್ಚಕ್ಕೆ ಸೀಮಿತಗೊಳಿಸಿದ್ದೇವೆ. ಇಂತಹ ಪ್ರಕರಣಗಳನ್ನು ದಾಖಲಿಸುವ ಮೂಲಕ ಈ ದೇಶದ ನ್ಯಾಯಾಂಗವನ್ನು ಕೆಳಮಟ್ಟಕ್ಕೆ ಇಳಿಸಬೇಡಿ" ಎಂದು ನ್ಯಾಯಮೂರ್ತಿ ನಾಗರತ್ನ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ವೇಳೆ ಸುಪ್ರೀಂ ಕೋರ್ಟ್‌ನ ಸ್ವಂತ ತೀರ್ಪುಗಳ ವಿರುದ್ಧ ಇಂತಹ ಅರ್ಜಿಗಳನ್ನು ಸಲ್ಲಿಸಲು ವಕೀಲರು ಹೇಗೆ ಸಲಹೆ ನೀಡುತ್ತಿದ್ದಾರೆ ಎಂದು ಪ್ರಶ್ನಿಸಿರುವ ಅವರು, "ಇಲ್ಲಿ ಏನಾಗುತ್ತಿದೆ? ವಕೀಲರು ಈ ರೀತಿಯ ಸಲಹೆ ನೀಡುತ್ತಿದ್ದಾರೆಯೇ? ನಾವು ವಕೀಲರಿಗೆ ದಂಡ ವಿಧಿಸಬೇಕಾಗುತ್ತದೆ. ನೀವು ಕಾನೂನು ತಿಳಿದಿರುವ ನಾಗರಿಕರು, ವೃತ್ತಿಪರರು. ನೀವು ಆರ್ಟಿಕಲ್ 32ರ ಅಡಿಯಲ್ಲಿ ಈ ನ್ಯಾಯಾಲಯದ ತೀರ್ಪನ್ನು ಪ್ರಶ್ನಿಸಿ ರಿಟ್ ಅರ್ಜಿಯನ್ನು ಸಲ್ಲಿಸುತ್ತೀರಾ? ಇದು ಅತ್ಯಂತ ಘೋರ ನಿಂದನೆ! ನಾವು ನಮ್ಮನ್ನು ಬಹಳ ಸಂಯಮದಿಂದ ನಿಯಂತ್ರಿಸಿಕೊಳ್ಳುತ್ತಿದ್ದೇವೆ.

**ರೋಟರಿ ಸಂಸ್ಥೆಯಲ್ಲಿ 81ನೇ ಸಂಸ್ಥಾಪನಾ ದಿನಾಚರಣೆ**

# ರೋಟರಿ ಸಂಸ್ಥೆಯ ಸಮಾಜ ಸೇವೆ ಅನನ್ಯ




ಅತಿಥಿಗಳಾಗಿ ಆಗಮಿಸಿದ ಡಾ. ಕೆ.ವಿ. ಧನ್ನೂರ್ ಮಾತನಾಡಿ, ರೋಟರಿ ಸಂಸ್ಥೆಯು ತಾನು ಬೆಳೆಯುವುದರ ಜೊತೆಗೆ ಇನ್ನೂ ಅನೇಕ ಸಂಸ್ಥೆಗಳಿಗೆ ಪ್ರಾಯೋಜತ್ವವನ್ನು ನೀಡಿ ಅವುಗಳಿಂದಲೂ ಸಮಾಜಿಕ ಸೇವಾ ಕಾರ್ಯಗಳನ್ನು ಕೈಗೊಳ್ಳುವಂತೆ ಪ್ರೇರಣೆ ನೀಡಿದೆ. ಈ ಸಂಸ್ಥೆಯು 80 ವರ್ಷಗಳ ಸೇವೆಯನ್ನು ಪೂರೈಸಲು ಅದರ ಸದಸ್ಯರ ಹಾಗೂ ಪದಾಧಿಕಾರಿಗಳ ಕಾರ್ಯ ತತ್ಪರತೆ ಹಾಗೂ ಅವರ ದಕ್ಷತೆ ಕಾರಣವಾಗಿದೆ ಎಂದು ಅಭಿಪ್ರಾಯಪಟ್ಟರು.

■ ವಿಜಯಸಾಕ್ಷಿ ಸುದ್ದಿ, ಗದಗ

ರೋಟರಿ ಸಂಸ್ಥೆ ಗದಗ-ಬೆಟಗೇರಿಯ 81ನೇ ಸಂಸ್ಥಾಪನಾ ದಿನಾಚರಣೆಯನ್ನು ಉಷಾದೇವಿ ಜಿ.ಕುಷ್ಟಗಿ ರೋಟರಿ ಕಮ್ಯುನಿಟಿ ಕೇರ್ ಸೆಂಟರ್‌ನಲ್ಲಿ ಆಚರಿಸಲಾಯಿತು.

ಮುಖ್ಯ ಅತಿಥಿಗಳಾಗಿ ಆಗಮಿಸಿ ರೊ. ವಿ.ಕೆ. ಗುರುಮಠ ಮಾತನಾಡಿ, ಈ ಭಾಗದ ಜನರಲ್ಲಿ ರೋಟರಿ ಸಂಸ್ಥೆ ತನ್ನ ಗೌರವವನ್ನು ಹೆಚ್ಚಿಸಿಕೊಂಡಿದೆ. ವೀರೇಶ್ವರ ಪುಣ್ಯಾಶ್ರಮದಲ್ಲಿ ಅಂಧರಿಗಾಗಿ ವಸತಿ ನಿಲಯ, ಅಂಧರಿಗಾಗಿ ಕೃತಕ ಬುದ್ಧಿಮತ್ತೆ ಕನ್ನಡಕ ವಿತರಣೆ, ಜೈಪೂರ ಫುಟ್ ಕ್ಯಾಂಪ್, ಉಚಿತ ಕಣ್ಣಿನ ಆಸ್ಪತ್ರೆಯಲ್ಲಿ ನಿರಂತರವಾಗಿ ಕಣ್ಣಿನ ಪೊರೆಯ ಶಸ್ತ್ರ ಚಿಕಿತ್ಸೆಯನ್ನು ನೆರವೇರಿಸುತ್ತಾ ಸಮಾಜದಲ್ಲಿ ತನ್ನದೇ ಆದ ಛಾಪು ಮೂಡಿಸಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಸಂಸ್ಥೆಯ ಅಧ್ಯಕ್ಷ ರೊ.ಡಾ. ರಾಜೇಂದ್ರ ಗಚ್ಚಿನ್ಮಠ ಮಾತನಾಡಿ, ಕಳೆದ 80 ವರ್ಷಗಳಿಂದ ಉತ್ತಮ ಕಾರ್ಯವನ್ನು ಕೈಗೊಂಡು ಸಂಸ್ಥೆಯ ಕೀರ್ತಿಯನ್ನು ಹೆಚ್ಚಿಸಿದ ಎಲ್ಲಾ ಮಾಜಿ ಅಧ್ಯಕ್ಷರುಗಳಿಗೆ ಹಾಗೂ ಹಾಲಿ ಸದಸ್ಯರು ಮತ್ತು ಪದಾಧಿಕಾರಿಗಳಿಗಳಿಗೆ ಅಭಿನಂದನೆ ಸಲ್ಲಿಸಿದರು.

ರೊ. ಶ್ರೀಧರ್ ಸುಲ್ತಾನಪೂರ್ ರೋಟರಿ ಸಂಸ್ಥೆಯ ಇತಿಹಾಸವನ್ನು ತಿಳಿಸಿದರು. ಸಮಾರಂಭದಲ್ಲಿ ಗದಗ ಜಿಲ್ಲಾ ಚೇಂಬರ್‌ಆಫ್ ಕಾಮರ್ಸ್‌ನ ಅಧ್ಯಕ್ಷ ರೊ. ಶರಣಬಸಪ್ಪ ಗುಡಿಮನಿ, ಗದಗ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ರಾಜು ಹೆಬ್ಬಳ್ಳಿ ಅವರನ್ನು ಸನ್ಮಾನಿಸಲಾಯಿತು. ರೊ. ಡಾ. ಶೇಖರ್ ಡಿ.ಸಜ್ಜನರ, ರೊ. ಮಹಾಂತೇಶ್ ಬಾತಖಾನಿ ಹಾಗೂ ರೊ. ಡಾ. ವಿನಯ್ ಅವರು ಅತಿಥಿಗಳ ಹಾಗೂ ಸನ್ಮಾನಿತರನ್ನು ಸಭೆಗೆ ಪರಿಚಯಿಸಿದರು. ರೊ. ಡಾ. ರಾಜಶೇಖರ ಬಳ್ಳಾರಿ, ರೊ. ನವೀನ ಕುಷ್ಟಗಿ ಸಮಾರಂಭದ ಆತಿಥ್ಯ ವಹಿಸಿದ್ದರು.

ರೊ. ಬಾಲಕೃಷ್ಣ ಕಾಮತ್ ಕಾರ್ಯಕ್ರಮ ನಿರೂಪಿಸಿದರು. ಸಮಾರಂಭದಲ್ಲಿ ರೊ. ಡಾ. ಧನೇಶ ದೇಸಾಯಿ, ರೊ. ಶೈಲೇಂದ್ರ ಬಿರಾದಾರ್, ರೊ. ಶಿವಾಚಾರ್ಯ ಹೊಸಳ್ಳಿಮಠ, ರೊ. ಡಾ. ಕಮಲಾಕ್ಷಿ ಅಂಗಡಿ, ರೊ. ಸಂತೋಷ ಅಕ್ಕಿ, ರೊ. ಅಕ್ಷಯ ಶೆಟ್ಟಿ, ಡಾ. ಆರ್.ಬಿ. ಉಪ್ಪಿನ ರೊ. ಮಾಧವ ಕುಲಕರ್ಣಿ, ರೊ. ಚನ್ನವೀರಪ್ಪ ಹುಣಶಿಕಟ್ಟಿ, ರೊ. ಚೇತನ ಅಂಗಡಿ, ರೊ. ಎಮ್.ಸಿ. ಐಲಿ, ರೊ. ಮಂಜುನಾಥ ಬೇಲೇರಿ, ಡಾ. ಪ್ರದೀಪ ಉಗಲಾಟ, ರೊ. ಹೆಚ್.ಎಸ್. ಪಾಟೀಲ, ರೊ. ಡಾ. ವ್ಹಿ.ಸಿ. ಕಲ್ಮಠ, ರೊ. ಅಶೋಕ ಅಕ್ಕಿ, ಅಶ್ವಿನಿ ಜಗತಾಪ, ನೀಲಾಂಬಿಕ ಉಗಲಾಟ ಮುಂತಾದವರು ಭಾಗವಹಿಸಿದ್ದರು. ಕಾರ್ಯದರ್ಶಿ ರೊ. ಸುರೇಶ ಎಸ್.ಕುಂಬಾರ ವಂದಿಸಿದರು.

# ನಾಟಕ, ಕಲೆಗಳಿಂದ ಆತ್ಮವಿಶ್ವಾಸ ವೃದ್ಧಿ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಮಕ್ಕಳ ಆತ್ಮವಿಶ್ವಾಸವನ್ನು ಬೆಳೆಸುವಲ್ಲಿ ನಾಟಕ ಮತ್ತು ಕಲೆಗಳು ಮಹತ್ವದ ಪಾತ್ರ ವಹಿಸುತ್ತವೆ ಎಂದು ರಾಷ್ಟ್ರ ಪ್ರಶಸ್ತಿ ವಿಜೇತ ಶಿಕ್ಷಕರಾದ ಕೆ.ಎಚ್. ನಾಯಕ ಹೇಳಿದರು.

ನಗರದ ಆಲೂರು ವೆಂಕಟರಾವ್ ಭವನದಲ್ಲಿ ಮಾರಿಯಾ ಗ್ರಾಮೀಣ ಮಹಿಳಾ ಮತ್ತು ಮಕ್ಕಳ ಸಾಂಸ್ಕೃತಿಕ ಸಂಘ ಆಯೋಜಿಸಿದ್ದ ಮಕ್ಕಳ ಹಬ್ಬ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪುಟ್ಟ ಮಕ್ಕಳು ವೇದಿಕೆಯ ಮೇಲೆ ಹೆಜ್ಜೆ ಹಾಕಿದಾಗ ಅಥವಾ ಬಣ್ಣದ ಕುಂಚವನ್ನು ಹಿಡಿದಾಗ, ಅವರು ತಮ್ಮನ್ನು ಮುಕ್ತವಾಗಿ ವ್ಯಕ್ತಪಡಿಸಲು ಪ್ರೋತ್ಸಾಹಿಸಲಾಗುತ್ತದೆ. ತೀರ್ಪಿನ ಭಯವಿಲ್ಲದೆ ತಮ್ಮ ಸೃಜನಶೀಲತೆಯನ್ನು ಹೊರಹಾಕುತ್ತಾರೆ. ನಾಟಕದ ಮೂಲಕ ಮಕ್ಕಳು ತಮ್ಮ ಧ್ವನಿಯನ್ನು ಪ್ರದರ್ಶಿಸಲು, ದೇಹ ಭಾಷೆಯನ್ನು ಬಳಸಲು ಮತ್ತು ಪ್ರದರ್ಶನಗಳನ್ನು ನೀಡಲು ಕಲಿಯುತ್ತಾರೆ. ಅವರ ಆತ್ಮವಿಶ್ವಾಸ ಮತ್ತು ಸಂವಹನ ಕೌಶಲ್ಯಗಳನ್ನು ಹೆಚ್ಚಿಸುತ್ತಾರೆ. ಅದೇ ರೀತಿ ಚಿತ್ರಕಲೆ ಅಥವಾ ಶಿಲ್ಪಕಲೆಯಂತಹ ವಿವಿಧ ಕಲಾ ಪ್ರಕಾರಗಳನ್ನು ಅನ್ವೇಷಿಸುವುದು, ಮಕ್ಕಳು ತಮ್ಮ ಸೃಷ್ಟಿಗಳಲ್ಲಿ ಸಾಧನೆ ಮತ್ತು ಹೆಮ್ಮೆಯನ್ನು ಬೆಳೆಸಿಕೊಳ್ಳಲು ಸಹಾಯ ಮಾಡುತ್ತದೆ ಎಂದರು.




ಅಧ್ಯಕ್ಷತೆ ವಹಿಸಿದ್ದ ಕರ್ನಾಟಕ ವಿದ್ಯಾವರ್ಧಕ ಸಂಘದ ಪ್ರಧಾನ ಕಾರ್ಯದರ್ಶಿ ಶಂಕರ ಹಲಗತ್ತಿ ಮಾತನಾಡುತ್ತಾ, ಕಲಾ ಯೋಜನೆಯನ್ನು ಪೂರ್ಣಗೊಳಿಸುವುದರಿಂದ ಮಕ್ಕಳಲ್ಲಿ ಸಾಧನೆ ಮತ್ತು ಹೆಮ್ಮೆಯ ಭಾವನೆ ಮೂಡುತ್ತದೆ. ಅದು ಚಿತ್ರಕಲೆಯನ್ನು ಮುಗಿಸುವುದಾಗಲಿ ಅಥವಾ ಕೈಯಿಂದ ಮಾಡಿದ ಉಡುಗೊರೆಯನ್ನು ರಚಿಸುವುದಾಗಲಿ, ಈ ಸಾಧನೆಗಳು ಅವರ ಸ್ವಾಭಿಮಾನವನ್ನು ಹೆಚ್ಚಿಸುತ್ತವೆ ಎಂದರು.

ಸಭಾ ಕಾರ್ಯಕ್ರಮದ ನಂತರ 'ಬೆಳಕು ಹಂಚಿದ ಬಾಲಕ' ಮತ್ತು 'ಅನುಭವ ಮಂಟಪ' ನಾಟಕ ಪ್ರದರ್ಶನಗೊಂಡವು. ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದ ಪ್ರಕಾಶ ಕಂಬಳಿ, ಎಮ್.ಎಮ್. ಚಿಕ್ಕಮಠ ಮಾತನಾಡಿದರು.

ಕಾರ್ಯಕ್ರಮದಲ್ಲಿ ಪ್ರಮೀಳಾ ಜಕ್ಕಣ್ಣವರ, ಶಿವಾನಂದ ಹಡಪದ, ಮೌನೇಶ್ ಕಮ್ಮಾರ, ಸಂತೋಷ್ ಕರಿಮಳ್ಳಣ್ಣವರ, ಡಾ. ಅಲ್ಲಾಭಕ್ಷ ಮಕಾಂದರ, ಯಲ್ಲಪ್ಪ ಬೆಂಡಿಗೇರಿ, ಸಿಕಂದರ ದಂಡಿನ ಉಪಸ್ಥಿತರಿದ್ದರು. ಜೀವಿತಾ ಎಸ್.ಹೊಳೆಆಲೂರ ಪ್ರಾರ್ಥಿಸಿದರು. ಶೃತಿ ಹುರುಳಿಕೊಪ್ಪ ಸ್ವಾಗತಿಸಿದರು. ಲಕ್ಷ್ಮೀ ಜಾಧವ ನಿರೂಪಿಸಿದರು.

## ಆರೋಗ್ಯ ನೈರ್ಮಲ್ಯ ಜಾಗೃತಿ ಕಾರ್ಯಕ್ರಮ



■ ವಿಜಯಸಾಕ್ಷಿ ಸುದ್ದಿ, ಗದಗ

ಬೆಟಗೇರಿಯ ಹಳೆ ಬನಶಂಕರಿ ದೇವಿ ದೇವಸ್ಥಾನದ ಆವರಣದ ಗದಗ ಜಿಲ್ಲಾ ದೇವಾಂಗ ನೌಕರರ ಸಂಘದ ಕಟ್ಟಡದಲ್ಲಿ ನಡೆದ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಜ್ಞಾನವಿಕಾಸ ಕಾರ್ಯಕ್ರಮ ನೆರವೇರಿತು.

ಆರೋಗ್ಯ ಮತ್ತು ನೈರ್ಮಲ್ಯದ ಕುರಿತು ಜಾನಪದ ಗಾಯಕರು, ಸಾಹಿತಿಗಳಾದ ಮಂಜುನಾಥ ಸಜ್ಜನರ ಮಾತನಾಡಿ, ಹಿರಿಯರ ಮಾರ್ಗದರ್ಶನದಲ್ಲಿ ಉತ್ತಮ ಜೀವನ ಶೈಲಿಯೊಂದಿಗೆ ಮೌಲ್ಯಯುತ ಜೀವನವನ್ನು ನಡೆಸಬೇಕು ಎಂದರಲ್ಲದೆ, ಉತ್ತಮ ಜೀವನ ಶೈಲಿಯಿಂದ ತಡೆಯಬಹುದಾದ ಆರೋಗ್ಯ ಸಮಸ್ಯೆಗಳ ಕುರಿತು ತಿಳಿಸಿದರು.

ಕೀಟಜನ್ಯ ರೋಗಗಳ ನಿಯಂತ್ರಣದಲ್ಲಿ ಸಾರ್ವಜನಿಕರ ಪಾತ್ರದ ಕುರಿತು ಪರಿಸರ ಹಾಗೂ ವೈಯಕ್ತಿಕ ಶುಚಿತ್ವದಿಂದ ಆಗುವ ಪ್ರಯೋಜನಗಳ ಕುರಿತು, ನೆಲ, ಜಲ, ಮಣ್ಣುಗಳ ಮಲಿನತೆಯಿಂದ ಆಗುವ ದುಷ್ಪರಿಣಾಮಗಳ ಕುರಿತು, ಉಪನ್ಯಾಸ ನೀಡಿದರು.

ಜ್ಞಾನ ವಿಕಾಸ ಸಮನ್ವಯಾಧಿಕಾರಿ ಗಂಗಮ್ಮ ಮರಾಠಿ ಮಾತನಾಡಿ ಇಂತಹ ಆರೋಗ್ಯ ಜಾಗೃತಿ ಕಾರ್ಯಕ್ರಮಗಳ ಸದುಪಯೋಗವನ್ನು ಎಲ್ಲರೂ ಪಡೆದುಕೊಳ್ಳಬೇಕು. ದುಡ್ಡು ಕೊಟ್ಟರೆ ಔಷಧ ಸಿಗಬಹುದು, ಆರೋಗ್ಯ ಸಿಗದು. ಆದ್ದರಿಂದ ಇಲ್ಲಿ ತಿಳಿದಂತಹ ಮಾಹಿತಿಯನ್ನು ಎಲ್ಲರಿಗೂ ತಿಳಿಸಿ ಸಮಾಜದಲ್ಲಿ ಜಾಗೃತಿಯನ್ನು ಮೂಡಿಸಬೇಕು ಎಂದು ಹೇಳಿದರು.

ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಘದ ಸದಸ್ಯರು ಕಾರ್ಯಕ್ರಮ ನಿರ್ವಹಿಸಿದರು.

**ಅರಣ್ಯ ಹಕ್ಕು ಕಾಯ್ದೆಗೆ ಮಾರ್ಪಾಡು ತರಲು ಕೇಂದ್ರಕ್ಕೆ ಪತ್ರ: ಅರಣ್ಯ ಸಚಿವ ಈಶ್ವರ ಖಂಡ್ರೆ**

# ಸದನದಲ್ಲಿ ಅರಣ್ಯ ಹಕ್ಕು ಪ್ರಸ್ತಾಪ

■ ವಿಜಯಸಾಕ್ಷಿ ಸುದ್ದಿ, ಬೆಳಗಾವಿ-ಸುವರ್ಣಸೌಧ

ಕೇಂದ್ರ ಸರ್ಕಾರ 2006ರಲ್ಲಿ ಜಾರಿಗೆ ತಂದಿರುವ ಅರಣ್ಯ ಹಕ್ಕು ಕಾಯ್ದೆಯಡಿ ಅರಣ್ಯದಲ್ಲಿ ವಾಸವಿರುವ ಪರಿಶಿಷ್ಟ ಪಂಗಡದವರನ್ನು ಹೊರತುಪಡಿಸಿ ಇತರೆ ಹಿಂದುಳಿದ ಸಮುದಾಯ ಜನರಿಗೆ ಮೂರು ತಲೆಮಾರು ಅಥವಾ 75 ವರ್ಷಗಳ ಕಾಲ ಸಾಗುವಳಿ ಮಾಡಿದ ದಾಖಲೆಗಳ ಆಧಾರದಲ್ಲಿ ಭೂಮಿ ಮಂಜೂರು ಮಾಡುವಂತೆ ನಿಯಮ ರೂಪಿಸಲಾಗಿದೆ. ಇದರಿಂದಾಗಿ ರಾಜ್ಯದಲ್ಲಿ ಅರಣ್ಯ ಹಕ್ಕು ಮಂಜೂರಾತಿ ಅರ್ಜಿ ಸಲ್ಲಿಸಿದ 2.41 ಲಕ್ಷ ಅರ್ಜಿಗಳ ಪೈಕಿ ಕೇವಲ 2 ಸಾವಿರ ಜನರಿಗೆ ಮಾತ್ರ ಮಂಜೂರಾತಿಗೆ ಅನುಮೋದನೆ ನೀಡಲಾಗಿದೆ. ಈ ಹಿನ್ನೆಲೆಯಲ್ಲಿ ಅರಣ್ಯ ಹಕ್ಕು ಕಾಯ್ದೆಗೆ ಮಾರ್ಪಾಡು ತರುವಂತೆ ಕೇಂದ್ರಕ್ಕೆ ಸರ್ಕಾರಕ್ಕೆ ಪತ್ರ ಬರೆಯಲಾಗಿದೆ ಎಂದು ಅರಣ್ಯ ಸಚಿವ ಈಶ್ವರ ಖಂಡ್ರೆ ಮಾಹಿತಿ ನೀಡಿದರು.



ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ನಡೆಯುತ್ತಿರುವ ಚಳಿಗಾಲದ ವಿಧಾನಮಂಡಲದ ಅಧಿವೇಶನದಲ್ಲಿ ಗುರುವಾರ ಶಾಸಕ ಅರಬೈಲು ಶಿವರಾಮ್ ಹೆಬ್ಬಾರ್ ಅವರ ಗಮನ ಸೆಳೆಯುವ ಸೂಚನೆಗೆ ಅವರು ಉತ್ತರಿಸಿದರು.

ಕಾಯ್ದೆಯ ಪ್ರಕಾರ ಯೋಜನೆ ಅನುಷ್ಠಾನ ಮಾಡುವ ಮುಖ್ಯ ಇಲಾಖೆ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯಾಗಿದೆ. ಅರಣ್ಯ ಇಲಾಖೆ ಸಾಗುವಳಿ ಕುರಿತು ಉಪಗ್ರಹ ಆಧಾರಿತ ಚಿತ್ರ ಹಾಗೂ ನಕ್ಷೆಗಳನ್ನು ನೀಡುತ್ತದೆ. ಅರಣ್ಯ ಹಕ್ಕು ಕಾಯ್ದೆಯಡಿ 2005 ಡಿಸೆಂಬರ್ 13ಕ್ಕಿಂತ ಹಿಂದೆ ಪರಿಶಿಷ್ಟ ವರ್ಗದವರು ಅರಣ್ಯದಲ್ಲಿ ಸಾಗುವಳಿ ಮಾಡುತ್ತಿದ್ದರೆ. ಅವರಿಗೆ ಕಾಯ್ದೆ ಪ್ರಕಾರ ಮಂಜೂರಾತಿ ಮಾಡಬಹುದಾಗಿದೆ. ರಾಜ್ಯದಲ್ಲಿ ಅರಣ್ಯ ಹಕ್ಕು ಮಂಜೂರಾತಿ ಅರ್ಜಿ ಸಲ್ಲಿಸಿದ್ದ 2.90 ಲಕ್ಷ ಪರಿಶಿಷ್ಟ ಅರ್ಜಿಗಳ ಪೈಕಿ ಶೇ. 30ರಷ್ಟಕ್ಕೆ ಅನುಮೋದನೆ ನೀಡಲಾಗಿದೆ. ಕಾಯ್ದೆಗೆ ತಿದ್ದುಪಡಿ ತರುವ ವಿಚಾರ ಕೇಂದ್ರ ಸರ್ಕಾರದ ಅಂಗಳದಲ್ಲಿದೆ ಎಂದು ಸಚಿವ ಈಶ್ವರ ಖಂಡ್ರೆ ಹೇಳಿದರು.

ಕಾಯ್ದೆ ನಿಯಮಗಳ 12 ಅಂಶಗಳಲ್ಲಿ 2 ಅಂಶಗಳನ್ನು ಪೂರೈಸಿದರೆ ಭೂಮಿ ಮಂಜೂರಾತಿಗೆ ಯಾವುದೇ ಅಡೆತಡೆಗಳು ಇಲ್ಲ. ಆದರೂ ಜಿಲ್ಲಾಧಿಕಾರಿಗಳ ಸಮಿತಿಯಲ್ಲಿ ಸಾಕಷ್ಟು ಅರ್ಜಿಗಳನ್ನು ತಿರಸ್ಕರಿಸಲಾಗುತ್ತಿದೆ. ಇದರ ಜೊತೆಗೆ ಉಪವಿಭಾಗಾಧಿಕಾರಿಗಳ ನ್ಯಾಯಾಲಯದಲ್ಲಿ ಪ್ರಕರಣಗಳನ್ನು ಹೂಡಿ ಅರ್ಜಿದಾರಿಗೆ ತೊಂದರೆ ನೀಡಲಾಗುತ್ತಿದೆ. ಇದಕ್ಕೆ ಅರಣ್ಯ ಇಲಾಖೆ ಸಚಿವರು ಕಡಿವಾಣ ಹಾಕಬೇಕು ಎಂದು ಶಾಸಕ ಅರಗ ಜ್ಞಾನೇಂದ್ರ ಕೋರಿದರು. ಶೃಂಗೇರಿ ಶಾಸಕ ಟಿ.ಡಿ. ರಾಜೇಗೌಡ ಅವರೂ ಸಹ ಇದಕ್ಕೆ ಧ್ವನಿಗೂಡಿಸಿದರು.

ಶಾಸಕ ಅರಬೈಲು ಶಿವರಾಮ್ ಹೆಬ್ಬಾರ್ ಮಾತನಾಡಿ, ಯಲ್ಲಾಪುರ ಕ್ಷೇತ್ರ ವ್ಯಾಪ್ತಿಯಲ್ಲಿ ಒಟ್ಟು 88,453 ಜನರು ಅರಣ್ಯ ಹಕ್ಕು ಮಂಜೂರಾತಿ ಅರ್ಜಿ ಸಲ್ಲಿಸಿದ್ದಾರೆ. ಇದರಲ್ಲಿ 73,859 ಅರ್ಜಿಗಳನ್ನು ತಿರಸ್ಕರಿಸಲಾಗಿದೆ. ಅರ್ಜಿ ಸಲ್ಲಿದ ಒಟ್ಟು ಜನರ ಪೈಕಿ ಶೇ. 3ರಷ್ಟು ಜನರಿಗೆ ಮಂಜೂರಾತಿ ನೀಡಲಾಗಿದೆ. ಸರ್ಕಾರ ತಿರಸ್ಕರಿಸಿದ ಅರ್ಜಿಗಳನ್ನು ಮತ್ತೊಮ್ಮೆ ಪರಿಶೀಲಿಸಬೇಕು ಎಂದು ಕೋರಿದರು.

# 18ನೇ ರಾಷ್ಟ್ರೀಯ ಪಂಚಾಯತ್ ಪರಿಷತ್ ಸಮ್ಮೇಳನ

▶▶ ಮೊದಲನೇ ಪುಟದಿಂದ

ಮಾತನಾಡಿ, ಸಮ್ಮೇಳನದಲ್ಲಿ ತಾಂತ್ರಿಕ ಅಧಿವೇಶನಗಳು ಜರುಗಲಿದ್ದು, ಮೊದಲ ದಿನ ಗ್ರಾಮ ಸ್ವರಾಜ್ಯದ ಗಾಂಧೀಯ ತತ್ವಗಳು, ಪಂಚಾಯತ್ ಕಾಯ್ದೆಗಳು, ವಿಕೇಂದ್ರೀಕೃತ ಆಡಳಿತ, ನೀತಿ-ನಿಯಮಗಳು ಮತ್ತು ಸಮುದಾಯ ಸಬಲೀಕರಣ ಕುರಿತಂತೆ ತಾಂತ್ರಿಕ ಅಧಿವೇಶನಗಳು ನಡೆಯಲಿವೆ. ದೇಶದ ಖ್ಯಾತ ಕ್ಷೇತ್ರ ತಜ್ಞರು, ಅಧಿಕಾರಿಗಳು, ಸಾಮಾಜಿಕ ಹೋರಾಟಗಾರರು ಮತ್ತು ಪಂಚಾಯತ್ ಚಳವಳಿಯ ನಾಯಕರು ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಿ ಚರ್ಚೆ ನಡೆಸಲಿದ್ದು, ಪ್ರಶ್ನೋತ್ತರ ಅವಧಿಗೂ ಅವಕಾಶ ನೀಡಲಾಗಿದೆ ಎಂದರು.

2ನೇ ದಿನದ ಸಮ್ಮೇಳನದಲ್ಲಿ ಪಂಚಾಯತ್ ರಾಜ್ ಸಂಸ್ಥೆಗಳ ಸಬಲೀಕರಣ, ಸುಸ್ಥಿರ ಅಭಿವೃದ್ಧಿ ಗುರಿಗಳ ಸ್ಥಳೀಕರಣ ಮತ್ತು ಗ್ರಾಮೀಣಾಭಿವೃದ್ಧಿಯಲ್ಲಿ ಮಾಹಿತಿ ತಂತ್ರಜ್ಞಾನ ಬಳಕೆ ವಿಷಯಗಳ ಕುರಿತು ಪ್ರಮುಖ ತಾಂತ್ರಿಕ ಅಧಿವೇಶನಗಳು ನಡೆಯಲಿವೆ. ನಂತರ ನಡೆಯುವ ಸಮಾರೋಪ ಸಮಾರಂಭದಲ್ಲಿ ರಾಷ್ಟ್ರಮಟ್ಟದ ಪಂಚಾಯತ್ ಚಳವಳಿ ನಾಯಕರಿಂದ ಮತ್ತು ಹಿರಿಯ ಆಡಳಿತಗಾರರಿಂದ ಸಮಾರೋಪ ಭಾಷಣಗಳು ನಡೆಯಲಿವೆ ಎಂದರು.

ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಕುಲಪತಿಗಳು (ಪ್ರ) ಹಾಗೂ ಕುಲಸಚಿವರಾದ ಪ್ರೊ. ಡಾ. ಸುರೇಶ ವಿ.ನಾಡಗೌಡ ಮಾತನಾಡಿ, ಸಮ್ಮೇಳನದ ಉದ್ಘಾಟನಾ ಕಾರ್ಯಕ್ರಮವು ಡಿಸೆಂಬರ್ 13ರಂದು ಬೆಳಿಗ್ಗೆ 10.30 ಗಂಟೆಗೆ ಜರುಗಲಿದೆ. ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ಸಮ್ಮೇಳನವನ್ನು ಉದ್ಘಾಟಿಸಿ, ಉದ್ಘಾಟನಾ ಭಾಷಣ ಮಾಡುವರು. ಈ ಸಂದರ್ಭದಲ್ಲಿ ಕರ್ನಾಟಕ ವಿಧಾನ ಪರಿಷತ್ತಿನ ಸಭಾಪತಿಗಳಾದ ಬಸವರಾಜ ಹೊರಟ್ಟಿ ಘನ ಉಪಸ್ಥಿತಿಯನ್ನು ವಹಿಸಲಿದ್ದಾರೆ. ಸಮ್ಮೇಳನದ ಮುಖ್ಯ ಅತಿಥಿಗಳಾಗಿ ಕರ್ನಾಟಕ ಸರ್ಕಾರದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಐಟಿ&ಬಿಟಿ ಸಚಿವರು ಮತ್ತು ಎಂ.ಜಿ.ಆರ್.ಡಿ.ಪಿ.ಆರ್ ವಿಶ್ವವಿದ್ಯಾಲಯದ ಸಹ-ಕುಲಾಧಿಪತಿಗಳಾದ ಪ್ರಿಯಾಂಕ ಖರ್ಗೆ ಭಾಗವಹಿಸಲಿದ್ದಾರೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಾನೂನು, ನ್ಯಾಯ, ಪ್ರವಾಸೋದ್ಯಮ ಸಚಿವರು ಮತ್ತು ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲವರು ವಹಿಸಲಿದ್ದಾರೆ.

ಅತಿಥಿಗಳಾಗಿ 5ನೇ ರಾಜ್ಯ ಹಣಕಾಸು ಆಯೋಗದ ಅಧ್ಯಕ್ಷರಾದ ಸಿ. ನಾರಾಯಣಸ್ವಾಮಿ, ಕರ್ನಾಟಕ ರಾಜ್ಯ ವಿಕೇಂದ್ರೀಕೃತ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯ ಉಪಾಧ್ಯಕ್ಷರಾದ ಡಿ.ಆರ್. ಪಾಟೀಲ, ಅಖಿಲ ಭಾರತ ಪಂಚಾಯತ್ ಪರಿಷತ್ ಅಧ್ಯಕ್ಷರು ಮತ್ತು ಮಾಜಿ ಕೇಂದ್ರ ಸಚಿವ ಸುಬೋಧ್ ಕಾಂತ್ ಸಾಹಾಯ್, ಜಿಲ್ಲೆಯ ಸಂಸದರು, ಶಾಸಕರು, ಜಿಲ್ಲಾ-ತಾಲೂಕು-ಗ್ರಾಮ ಪಂಚಾಯತ್ ಅಧ್ಯಕ್ಷರು ಪಾಲ್ಗೊಳ್ಳಲಿದ್ದಾರೆ ಎಂದು ವಿವರಿಸಿದರು.

ಈ ಸಂದರ್ಭದಲ್ಲಿ ಕರ್ನಾಟಕ ಪಂಚಾಯತ್ ರಾಜ್ ಪರಿಷತ್ತಿನ ಕಾರ್ಯಕಾರಿ ಅಧ್ಯಕ್ಷ ವಿ.ವೈ. ಘೋರ್ಪಡೆ, ತ್ರಿಪುರ ರಾಜ್ಯದ ಶಾಸಕ ರಾಜೀವ ಸಿನ್ಹ, ಪಂಚಾಯತ್ ಪರಿಷತ್ ಕಾರ್ಯದರ್ಶಿ ಅಶೋಕ ಚೌಹಾಣ, ವಾಸಣ್ಣ ಕುರಡಗಿ, ಜೆ.ಕೆ. ಜಮಾದಾರ, ಪ್ರಕಾಶ ಮಾಚೇನಹಳ್ಳಿ ಹಾಜರಿದ್ದರು.

**ಪಿಎಸ್‌ಐ ಈರಣ್ಣ ರಿತ್ತಿ ಅಮಾನತ್ತಿಗೆ ಆಗ್ರಹಿಸಿ ಹಿಂದೂ ಸಂಘಟನೆಗಳ ಒಕ್ಕೂಟದಿಂದ ಪ್ರತಿಭಟನೆ**

# ಪಿಎಸ್‌ಐ ವರ್ಗಾವಣೆಯಾಗದಿದ್ದರೆ ಸಿಎಂಗೆ ಕಪ್ಪು ಪಟ್ಟಿ ಪ್ರದರ್ಶನ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶುಕ್ರವಾರ ಶಿರಹಟಿಯಲ್ಲಿ ವಿವಿಧ ಹಿಂದೂ ಸಂಘಟನೆಗಳ ಒಕ್ಕೂಟದ ವತಿಯಿಂದ ಪಿಎಸ್‌ಐ ಈರಣ್ಣ ರಿತ್ತಿ ಅವರನ್ನು ಅಮಾನತುಗೊಳಿಸುವಂತೆ ಆಗ್ರಹಿಸಿ ಪ್ರತಿಭಟನೆ ನಡೆಸಿ ನಂತರ ತಹಸೀಲ್ದಾರರಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ರಾಜು ಖಾನಪ್ಪನವರ, ಸಂತೋಷ ಕುರಿ, ಸಮಾಜದಲ್ಲಿ ಶಾಂತಿ-ಸುವ್ಯವಸ್ಥೆ ಕಾಪಾಡಬೇಕಾಗಿರುವ ಪೊಲೀಸ್ ಅಧಿಕಾರಿಗಳೇ ಶಿರಹಟ್ಟಿ ತಾಲೂಕಿನಲ್ಲಿ ಮುಗ್ಧ ರೈತರು, ಹಿಂದೂಗಳ ಮೇಲೆ ದೌರ್ಜನ್ಯ ನಡೆಸಿ ಹಣ ವಸೂಲಿ ಕೆಲಸದಲ್ಲಿ ನಿರತರಾಗಿದ್ದಾರೆ. ದೇವಿಹಾಳ ಗ್ರಾಮದ ಅಮಾಯಕ ಲಂಬಾಣಿ ರೈತ ಸೋಮಪ್ಪ ಲಮಾಣಿ ಜಮೀನಿನ ಕೆಲಸ ಕಾರ್ಯ ಮುಗಿಸಿ ಮನೆಗೆ ವಾಪಸ್ಸಾಗುತ್ತಿದ್ದ ಸಂದರ್ಭದಲ್ಲಿ ಪಿಎಸ್‌ಐ ಈರಣ್ಣ ರಿತ್ತಿ ಇಸ್ಪೀಟ್ ಆಡಿದ್ದಾರೆಂಬ ಸುಳ್ಳು ಪ್ರಕರಣ ದಾಖಲಿಸಿ ಹಣ ವಸೂಲಿ ಮಾಡಿ ಲಾಠಿಯಿಂದ ಮನಸೋಇಚ್ಛೆ ಥಳಿಸಿ ಜಾತಿ ನಿಂದನೆ ಮಾಡಿದ್ದಾರೆ. ಇದರಿಂದಾಗೊ ಸೋಮಪ್ಪ ಲಮಾಣಿಯ ಮೂತ್ರಪಿಂಡಕ್ಕೆ ಬಾವು ಬಂದು ಆಸ್ಪತ್ರೆಗೆ ದಾಖಲಾಗಿ ಚಿಕಿತ್ಸೆ ಪಡೆಯುತ್ತಿದ್ದಾರೆ.




ಪಿಎಸ್‌ಐ ಈರಣ್ಣ ರಿತ್ತಿ ಅಮಾನತ್ತಿಗೆ ಆಗ್ರಹಿಸಿ ಕಳೆದ 15 ದಿನಗಳಿಂದ ತಹಸೀಲ್ದಾರ ಕಚೇರಿ ಮುಂದೆ ನಿರಂತರ ಪ್ರತಿಭಟನೆ ನಡೆಸಿದರೂ ಸಹ ಸರಕಾರ ಈ ಅಧಿಕಾರಿಯ ಒತ್ತಡಕ್ಕೆ ಮಣಿದು ಯಾವುದೇ ಕ್ರಮ ಕೈಕೊಳ್ಳದೇ ಭ್ರಷ್ಟ ಹಿಂದೂ ವಿರೋಧಿ ಅಧಿಕಾರಿಯನ್ನು ರಕ್ಷಿಸುತ್ತಿದೆ. ಒಂದು ವೇಳೆ ಈ ಅಧಿಕಾರಿಯ ಮೇಲೆ ಕ್ರಮ ಜರುಗಿಸಲು ಹಿಂದೇಟು ಹಾಕಿದಲ್ಲಿ ಗದಗ ಜಿಲ್ಲಾಧಿಕಾರಿ ಕಚೇರಿ, ಬೆಳಗಾವಿ ಐಜಿಪಿ ಕಚೇರಿ, ಬೆಂಗಳೂರಿನ ವಿಧಾನಸೌಧದ ಮುಂದೆ ವಿವಿಧ ಹಿಂದೂ ಸಂಘಟನೆಗಳ ಸಹಯೋಗದೊಂದಿಗೆ ಉಗ್ರ ಪ್ರತಿಭಟನೆ ನಡೆಸಲಾಗುವುದೆಂದು ಮನವಿಯಲ್ಲಿ ತಿಳಿಸಿದ್ದಾರೆ.


ಈ ಸಂದರ್ಭದಲ್ಲಿ ನಾಗರಾಜ ಲಕ್ಕುಂಡಿ, ಫಕ್ಕೀರೇಶ ರಟ್ಟಿಹಳ್ಳಿ, ಶಂಕರ ಮರಾಠೆ, ಬಿ.ಡಿ. ಪಲ್ಲೇದ, ನಂದಾ ಪಲ್ಲೇದ, ಅಶೋಕ ಶಿರಹಟ್ಟಿ ಮಾತನಾಡಿದರು.

ಇದಕ್ಕೂ ಮುನ್ನ ಪಟ್ಟಣದ ಶ್ರೀ ಹನುಮಂತದೇವರ ದೇವಸ್ಥಾನದಿಂದ ಪ್ರತಿಭಟನಾ ಮೆರವಣಿಗೆಯು ಬಜಾರ ರಸ್ತೆ, ಬಸವೇಶ್ವರ ವೃತ್ತ, ನೆಹರು ವೃತ್ತಗಳ ಮೂಲಕ ಸಾಗಿತು. ಮುಂಜಾಗ್ರತಾ ಕ್ರಮವಾಗಿ ಡಿಎಸ್‌ಪಿ ಸೇರಿದಂತೆ ಪೊಲೀಸ್ ಅಧಿಕಾರಿಗಳು ಬಿಗಿ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಕಲ್ಪಿಸಿದ್ದರು.

ಈ ಸಂದರ್ಭದಲ್ಲಿ ಜಾನು ಲಮಾಣಿ, ರಾಮಣ್ಣ ಕಂಬಳಿ, ಶಿವು ಲಮಾಣಿ, ಪುಂಡಲೀಕ ಲಮಾಣಿ, ಥಾವರೆಪ್ಪ ಲಮಾಣಿ, ಅಶೋಕ ವರವಿ, ವಿಠ್ಠಲ ಭಿಡವೆ, ಪರಶುರಾಮ ಡೊಂಕಬಳ್ಳಿ, ಸಂತೋಷ ತೆ-ಲಡೇಕಾರ, ತಿಪ್ಪಣ್ಣ ಲಮಾಣಿ ಮುಂತಾದವರು ಉಪಸ್ಥಿತರಿದ್ದರು.

> ಶುಕ್ರವಾರ ಸಂಜೆ ಒಳಗೆ ಪಿಎಸ್‌ಐ ಈರಣ್ಣ ರಿತ್ತಿ ಅವರನ್ನು ಬೇರೆ ಕಡೆಗೆ ವರ್ಗಾವಣೆ ಮಾಡಬೇಕು. ಇಲ್ಲದೇ ಹೋದಲ್ಲಿ ಡಿ.13ರಂದು ಲಕ್ಷ್ಮೇಶ್ವರ ಪಟ್ಟಣಕ್ಕೆ ಸಿಎಂ ಸಿದ್ದರಾಮಯ್ಯ ಆಗಮಿಸಿದ ಸಂದರ್ಭದಲ್ಲಿಯೂ ಸಂಘಟನೆಯ ವತಿಯಿಂದ ಕಪ್ಪು ಪಟ್ಟಿ ಪ್ರದರ್ಶನ ಮಾಡಲಾಗುವುದು. ಶಿರಹಟ್ಟಿ ಬಂದ್‌ಗೆ ಕರೆ ನೀಡಲಾಗಿತ್ತು. ಬಹುತೇಕರು ನಮ್ಮ ಕರೆಗೆ ಸ್ಪಂದಿಸಿಲ್ಲ. ಹೋರಾಟವನ್ನು ಹತ್ತಿಕ್ಕುವ ಕೆಲಸ ನಡೆದಿದೆ, ಮುಂಬರುವ ದಿನಗಳಲ್ಲಿ ಇಂತವರಿಗೆ ಕಾನೂನಿನ ಮೂಲಕವೇ ನಾವು ಉತ್ತರಿಸಲಿದ್ದೇವೆ ಎಂದು ರಾಜು ಖಾನಪ್ಪನವರ ಹೇಳಿದರು.

# ಜಾತ್ರಾ ಮಹೋತ್ಸವದ ಪೂರ್ವಭಾವಿ ಸಭೆ ಡಿ.17ಕ್ಕೆ



■ ವಿಜಯಸಾಕ್ಷಿ ಸುದ್ದಿ, ಗದಗ

ಪ್ರತಿ 12 ವರ್ಷಕ್ಕೊಮ್ಮೆ ನಡೆಯುವ ಗದಗ-ಬೆಟಗೇರಿ ನಗರದ ಗ್ರಾಮ ದೇವತೆಯರಾದ ದ್ಯಾಮಮ್ಮ ಹಾಗೂ ದುರ್ಗಮ್ಮ ಹರಿಜಾತ್ರೆಯ ಪೂರ್ವಭಾವಿ ಸಭೆಯನ್ನು ಡಿ. 17ರಂದು ಸಾಯಂಕಾಲ 5.30 ಗಂಟೆಗೆ ಗದಗ ನಗರದ ಒಕ್ಕಲಗೇರಿ ಓಣಿಯ ಶ್ರೀ ರಾಚೋಟಿ ವೀರಭದ್ರೇಶ್ವರ ದೇವಸ್ಥಾನದಲ್ಲಿ ಕರೆಯಲಾಗಿದೆ.

ಗದಗ-ಬೆಟಗೇರಿ ನಗರದ ಸರ್ವ ಭಕ್ತಾದಿಗಳು ಹಾಗು ಸಾರ್ವಜನಿಕರು ಆಗಮಿಸಿ ತಮ್ಮ ಸಲಹೆ-ಸೂಚನೆಗಳನ್ನು ನೀಡಬೇಕೆಂದು ಟ್ರಸ್ಟ್ ಕಮಿಟಿಯ ಹಿರಿಯ ಸದಸ್ಯರಾದ ಎಸ್.ಎ. ಮೊರಬದ ವಕೀಲರು, ಕೊಟ್ರಪ್ಪ ಕಮತರ ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.

# ಮಕ್ಕಳಿಗೆ ಆಧ್ಯಾತ್ಮಿಕ ಶಿಕ್ಷಣ ಬೇಕು



■ ವಿಜಯಸಾಕ್ಷಿ ಸುದ್ದಿ, ಹೊಸನಗರ

ಮಕ್ಕಳಿಗೆ ಭೌತಿಕ ಶಿಕ್ಷಣದೊಂದಿಗೆ ಆಧ್ಯಾತ್ಮಿಕ ಶಿಕ್ಷಣವೂ ಬೇಕು. ಬಾಲ್ಯದಲ್ಲಿ ವಿದ್ಯೆ, ಯೌವನದಲ್ಲಿ ಸಂಪತ್ತು ಇವೆರಡೂ ಬದುಕಿಗೆ ಎಷ್ಟು ಅವಶ್ಯವೋ, ಮಕ್ಕಳಿಗೆ ನೀತಿ ಶಿಕ್ಷಣವೂ ಅಷ್ಟೇ ಅವಶ್ಯವೆಂದು ಮಳಲಿ ಸಂಸ್ಥಾನ ಮಠದ ಡಾ. ಗುರುನಾಗಭೂಷಣ ಶಿವಾಚಾರ್ಯ ಸ್ವಾಮಿಗಳು ನುಡಿದರು.

ಅವರು ಗುರುವಾರ ತಾಲೂಕಿನ ಬಟ್ಟೆಮಲ್ಲಪ್ಪ ಗ್ರಾಮದ ಶ್ರೀ ರಾಮಕೃಷ್ಣ ವಿದ್ಯಾಶಾಲೆಯ ವಾರ್ಷಿಕೋತ್ಸವ ಸಮಾರಂಭವನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು.

ಮಾನವ ಜನ್ಮ ಬಹಳ ಶ್ರೇಷ್ಠವಾದದ್ದು. ಅನೇಕ ಜನ್ಮಗಳ ಪುಣ್ಯದ ಫಲವೇ ಮಾನವ ಜನ್ಮವಾಗಿದೆ.

ಆದ್ದರಿಂದ ಸತ್ಯಂ ವದ, ಧರ್ಮಂ ಚರ ಎಂಬ ಮಾತುಗಳನ್ನು ಮರೆಯದೇ ಬದುಕಿ ಬಾಳಬೇಕು. ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ ದಶಧರ್ಮ ಸೂತ್ರಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ನಡೆಯುವ ಅವಶ್ಯಕತೆ ಇದೆ. ಧರ್ಮ ಜೀವನದ ಭದ್ರ ಬುನಾದಿಯಾಗಿದೆ ಎಂದರು.

ಸಮಾರಂಭದಲ್ಲಿ ಶಾಲಾ ಮುಖ್ಯಸ್ಥರಾದ ಡಿ.ಎಂ. ದೇವರಾಜ್, ಗಣಪತಿ, ಬಸವರಾಜಗೌಡ್ರು ಉಪಸ್ಥಿತರಿದ್ದರು. ಸರಿತಾ ದೇವರಾಜ್ ಸ್ವಾಗತಿಸಿದರು.

ಪೂರ್ವಿಕಾ ಹಾಗೂ ಹರ್ಷಾ ನಿರೂಪಿಸಿದರು. ಮುಖ್ಯ ಶಿಕ್ಷಕ ಕರುಣಾಕರ ವಂದಿಸಿದರು. ಶಾಲಾ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

# ರೈತರ ಶ್ರಮಕ್ಕೆ ಬೆಲೆಯಿಲ್ಲವೇ?

■ ವಿಜಯಸಾಕ್ಷಿ ಸುದ್ದಿ, ಗದಗ

ತಲೆ ತಲಾಂತರದಿಂದ ಕೃಷಿ ಕಾಯಕವನ್ನು ಮಾಡಿ ನಾಡಿನ ಜೀವಿಗಳಿಗೆಲ್ಲಾ ಅನ್ನದಾತನಾಗಿದ್ದರೂ ಕೂಡಾ ರೈತನ ಸ್ಥಿತಿ ಮಾತ್ರ ಕಠಿಣವಾಗಿಯೇ ಇರುವುದು ತುಂಬಾ ದುಖಃಕರ ಸಂಗತಿ. ಕೃಷಿ ಕಾರ್ಮಿಕರ ಕೊರತೆಯಿಂದಾಗಿ ದುಬಾರಿಯಾದರೂ ಯಂತ್ರಗಳ ಸಹಾಯದಿಂದ ಬೆಳೆದ ಫಸಲನ್ನು ಒಕ್ಕಲು ಮಾಡಿ, ಮಾರಾಟ ಮಾಡುವ ಹಂತ ತಲುಪಿದಾಗ ಮಾರುಕಟ್ಟೆಯಲ್ಲಿ ದಿಢೀರನೆ ಬೆಲೆ ಪಾತಾಳಕ್ಕೆ ಕುಸಿದು ರೈತನನ್ನು ಹತಾಶನನ್ನಾಗಿಸುತ್ತದೆ.

ನಮ್ಮ ದೇಶಕ್ಕೆ ಸ್ವಾತಂತ್ರ್ಯ ದೊರಕಿ 75 ವರ್ಷಗಳಾಗಿದ್ದರೂ ಸಹ ರೈತನ ಈ ಸ್ಥಿತಿಗೆ ಕಾರಣವಾದರೂ ಏನು? ತಾನು ಬೆಳೆದ ಉತ್ಪನ್ನಗಳಿಗೆ ಸರಕಾರಗಳು ವೈಜ್ಞಾನಿಕ ಬೆಂಬಲದ ಬೆಲೆ ನಿಗದಿಪಡಿಸಿ



ಅದರ ಅಡಿಯಲ್ಲಿ ಖರೀದಿ ಮಾಡುವಂತೆ ರೈತರು ಬೀದಿಗೆ ಬಂದು ಅಂಗಲಾಚುವುದಾದರೂ ಏಕೆ? ಕೃಷಿಯನ್ನು ಮಾಡುವುದು ಅಪರಾಧವೇ? ರೈತನ ಜೀವಕ್ಕೆ, ಶ್ರಮಕ್ಕೆ ಬೆಲೆಯೇ ಇಲ್ಲವೇ... ಈ ಎಲ್ಲ ಪ್ರಶ್ನೆಗಳಿಗೆ ಉತ್ತರ ಸಿಗಬೇಕಾದರೆ ಸರಕಾರ ಕೂಡಲೇ ಎಚ್ಚೆತ್ತುಕೊಳ್ಳಬೇಕು.

ರೈತರು ಆರ್ಥಿಕ ಅಭದ್ರತೆಯಿಂದ ಹೊರಬಂದು ನೆಮ್ಮದಿಯಿಂದ ಬದುಕಲು ಸಾಧ್ಯವಾಗಬೇಕಾದರೆ ರೈತರಿಗೆ ಸರಿಯಾದ ಸಮಯಕ್ಕೆ ಬಡ್ಡಿ ರಹಿತ ಸಾಲ ಸೌಲಭ್ಯ, ಉತ್ತಮ ಗುಣಮಟ್ಟದ, ಬೀಜ, ಗೊಬ್ಬರ, ಕ್ರಿಮಿನಾಶಕ ಔಷಧಿಗಳು, ಯಂತ್ರೋಪಕರಣಗಳು ಇತ್ಯಾದಿ ಅವಶ್ಯಕ ಸೌಲಭ್ಯಗಳನ್ನು ನೀಡಬೇಕು. ಬೆಳೆ ಹಾನಿಯಾದರೆ ಬೆಳೆಹಾನಿ ಪರಿಹಾರವನ್ನು ಒಂದು ತಿಂಗಳ ಒಳಗಾಗಿ ನೀಡಬೇಕು. ಒಟ್ಟಾರೆಯಾಗಿ ಈವರೆಗೆ ರೈತ ಅನುಭವಿಸಿದ ತೊಂದರೆಗಳು ನಿವಾರಣೆಯಾಗಿ ಸರಕಾರಿ ಕಚೇರಿಯ ಒಬ್ಬ 'ಡಿ' ದರ್ಜೆಯ ನೌಕರನಿಗೆ ಇರುವಷ್ಟು ಆರ್ಥಿಕ ಭದ್ರತೆಯು ದೊರಕಿ ನೆಮ್ಮದಿಯಾಗಿ ಬದುಕಲು ಇದು ಅವಶ್ಯವಿರುತ್ತದೆ ಎಂದು ತಾಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ಬಿ.ಎಸ್. ಚಿಂಚಲಿ ವಿನಂತಿಸಿದ್ದಾರೆ.

# ಸಿಎಂ ಆಗಮನಕ್ಕೆ ಸಕಲ ಸಿದ್ಧತೆ

▶▶ ಮೊದಲನೇ ಪುಟದಿಂದ

ಮಾಜಿ ಶಾಸಕರು, ವಿಜ್ಞಾನಿಗಳು ಆಗಮಿಸುವರು ಎಂದು ಸಂಸ್ಥೆಯ ಟಿ. ಈಶ್ವರ ತಿಳಿಸಿದರು.

ಈ ವೇಳೆ ಜಿ.ಎಸ್. ಗಡ್ಡದೇವರಮಠ, ರಾಮಣ್ಣ ಲಮಾಣಿ, ಉಪವಿಭಾಗಾಧಿಕಾರಿ ಗಂಗಪ್ಪ, ಪಿಡಿ ಬಸನಗೌಡ ಕೋಟೂರು, ತಹಸೀಲ್ದಾರ ಧನಂಜಯ ಎಂ, ಪುರಸಭೆ ಮುಖ್ಯಾಧಿಕಾರಿ ಮಹಾಂತೇಶ ಬೀಳಗಿ, ಲೋಕೋಪಯೋಗಿ ಇಲಾಖೆ ಎಇಇ ಫಕ್ಕೀರೇಶ ತಿಮ್ಮಾಪೂರ, ಸಿಪಿಐ ಬಿ.ವಿ. ನ್ಯಾಮಗೌಡ, ಪಿಎಸ್‌ಐ ನಾಗರಾಜ ಗಡಾದ, ಮಂಜುನಾಥ ಮುದಗಲ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಇದ್ದರು.

# ಮಹಿಳೆಯರ ಸಮೃದ್ಧ ಜೀವನಕ್ಕೆ ಶ್ರಮಿಸಿ

▶▶ ಮೊದಲನೇ ಪುಟದಿಂದ

ಮಿಷನ್ ಶಕ್ತಿ-ಸಮಗ್ರ ಮಹಿಳಾ ಸಬಲೀಕರಣ ಕಾರ್ಯಕ್ರಮವನ್ನು ಜಿಲ್ಲೆಯಲ್ಲಿ ಸಮರ್ಪಕವಾಗಿ ಅನುಷ್ಠಾನಗೊಳಿಸಬೇಕೆಂದು ಹೇಳಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕಿ ಡಾ. ಎಚ್.ಎಚ್. ಕುಕನೂರ ಸ್ವಾಗತಿಸಿ, ಸಭೆ ನಿರ್ವಹಿಸಿದರು. ಸಭೆಯಲ್ಲಿ ವಿವಿಧ ಇಲಾಖೆಗಳ ಜಿಲ್ಲಾಮಟ್ಟದ ಅಧಿಕಾರಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ಹಾಗೂ ತಾಲೂಕು ಅಧಿಕಾರಿಗಳು, ಮಕ್ಕಳ ರಕ್ಷಣಾ ಘಟಕ ಸೇರಿದಂತೆ ಮಕ್ಕಳ ವಿವಿಧ ಕಾರ್ಯಕ್ರಮಗಳ ನಿರ್ವಾಹಕರು ಭಾಗವಹಿಸಿದ್ದರು.

# ಬೀಜೋಪಚಾರದಿಂದ ಉತ್ತಮ ಇಳುವರಿ



■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಬಿತ್ತನೆಗೂ ಮೊದಲು ಸರಿಯಾಗಿ ಬೀಜೋಪಚಾರ ಮಾಡುವುದರಿಂದ ಬೀಜದಿಂದ ಹಾಗೂ ಮಣ್ಣಿನಿಂದ ಬರುವ ರೋಗ ತಡೆಗಟ್ಟಲು ಸಾಧ್ಯ ಎಂದು ಕೃಷಿ ವಿಜ್ಞಾನಿ ಡಾ. ಕಲಾವತಿ ಕಾಂಬಳೆ ಹೇಳಿದರು.

ಅವರು ಪಟ್ಟಣ ಸಮಿಪದ ಅಂತೂರ ಬೆಂತೂರ ಗ್ರಾಮದ ರೈತರ ಜಮಿನುಗಳಿಗೆ ಭೇಟಿ ನೀಡಿ ಕಡಲೆ, ಗೋಧಿ, ಕುಸಬಿ, ಜೋಳ ಬೆಳೆಗಳಲ್ಲಿ ಕಂಡುಬರುವ ಕೀಟ ಭಾಧೆ ಕುರಿತು ಮಾತನಾಡಿ, ಕಡಲೆ ಬೆಳೆಗಳಲ್ಲಿ ಸಿಡಿರೋಗ ನಿಯಂತ್ರಣಕ್ಕೆ ಟ್ರೈಕೋಡರ್ಮ ಬೀಜೋಪಚಾರ ಮಾಡುವುದರಿಂದ ನಿಯಂತ್ರಣ ಮಾಡಲು ಸಾಧ್ಯವಾಗುತ್ತದೆ. ಹೆಚ್ಚಿನ ಮಾಹಿತಿಗೆ ಸಮಿಪದ ಕೃಷಿ ಕೇಂದ್ರಕ್ಕೆ ಭೇಟಿ ನೀಡಿ ಎಂದರು.

ಡಾ. ಮೋಟಗಿ ಮಾಹಿತಿ ನೀಡಿ, ಕುಸುಬೆ ಬೆಳೆಯಲ್ಲಿ ಸೀರು ಹಾಗೂ ಹೇನು ನಿಯಂತ್ರಣಕ್ಕೆ ಲ್ಯಾಂಬಡೋ ಸೈಲೋತ್ರಿ ಸಿಂಪರಣೆ ಮಾಡುವುದರಿಂದ ಉತ್ತಮ ಇಳುವರಿ ಪಡೆಯಬಹುದು. ಗೋಧಿಯಲ್ಲಿ ನೈಟ್ರೋಜನ್ ಕೊರತೆ ಉಂಟಾದಲ್ಲಿ ನ್ಯಾನೋ ಯೂರಿಯಾ ಸಿಂಪರಣೆ ಮಾಡುವುದರಿಂದ ಉತ್ತಮ ಫಸಲು ಪಡೆಯಲು ಸಾಧ್ಯವಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಡಾ. ಸಂಗಪ್ಪಶೆಟ್ಟಿ ಬಾಳಕುಂದಿ, ಸಹಾಯಕ ಕೃಷಿ ಅಧಿಕಾರಿ ರಾಜೇಶ್ವರಿ ಚಿನಿವಾಲರ, ಮಂಜುನಾಥ ಸೂಡಿ ಹಾಗೂ ಅಂತೂರ ಬೆಂತೂರ ಗ್ರಾಮದ ರೈತ ಬಾಂಧವರು ಇದ್ದರು.

**ಬೀಚಿಯವರ 13ನೇ ಸ್ಮರಣೋತ್ಸವದಲ್ಲಿ ಗಂಗಾವತಿ ಪ್ರಾಣೇಶ್ ಅಭಿಮತ**

# ಬೀಚಿ ಸಾಹಿತ್ಯ ಬದುಕನ್ನು ಕಲಿಸುತ್ತದೆ



■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಬೀಚಿ ಹಾಸ್ಯ ಸಾಹಿತಿ ಎನ್ನಿಸಿಕೊಂಡಿದ್ದರೂ ಅವರ ಸಾಹಿತ್ಯದಲ್ಲಿ ಒಂದು ಸಂದೇಶವಿದೆ. ಅವರ ಸಾಹಿತ್ಯದ ಓದುವಿಕೆ ನಮಗೆ ಬದುಕನ್ನು ಕಲಿಸುತ್ತದೆ ಎಂದು ಹಾಸ್ಯ ದಿಗ್ಗಜ ಗಂಗಾವತಿ ಪ್ರಾಣೇಶ್ ಹೇಳಿದರು.

ಪಟ್ಟಣದ ಹಿರೇಮಠದ ಸಭಾಭವನದಲ್ಲಿ ಗುರುವಾರ ಸಂಜೆ ನಡೆದ ಬೀಚಿಯವರ 13ನೇ ಸ್ಮರಣೋತ್ಸವದಲ್ಲಿ ಅವರು ಮಾತನಾಡಿದರು.

ನಾನಿಂದು ಜಗದ್ವಿಖ್ಯಾತ ಕಲಾವಿದನಾಗಿದ್ದೇನೆ. ಅದಕ್ಕೆ ಮೂಲ ನರೇಗಲ್ಲ ಎಂಬುದನ್ನು ನಾನೆಂದಿಗೂ ಮರೆತಿಲ್ಲ. ಇಲ್ಲಿನ ಶ್ರೀ ದತ್ತಾತ್ರೇಯ ದೇವಸ್ಥಾನದ ಉತ್ಸವಕ್ಕೆ ಹಲವಾರು ವರ್ಷಗಳ ಕಾಲ ನಾನು ಬಂದಿದ್ದು, ಅನೇಕ ಭಕ್ತರು ತಮ್ಮ ಮನೆಯಲ್ಲಿ ನನ್ನನ್ನು ಮೂರು ನಾಲ್ಕು ದಿನಗಳು ಇರಿಸಿಕೊಂಡು ನನ್ನ ಈ ಬೆಳವಣಿಗೆಗೆ ಕಾರಣರಾಗಿದ್ದಾರೆ. ಅವರ ಋಣದ ಜೊತೆಗೆ ಶ್ರೀ ಗುರು ದತ್ತಾತ್ರೇಯನ ಆಶೀರ್ವಾದವನ್ನೆಂದಿಗೂ ಮರೆಯಲಾರೆ ಎಂದರು.

ನನ್ನ ಮಾತಿಗೆ ಗೌರವ ನೀಡಿ ಇಲ್ಲಿನ ಸಾಹಿತ್ಯಾಸಕ್ತರು 13 ವರ್ಷಗಳ ಕೆಳಗೆ ಇಡೀ ಕರ್ನಾಟಕದಲ್ಲಿಯೇ ಮೊದಲನೆಯದಾದ ಬೀಚಿ ಬಳಗವನ್ನು ಸ್ಥಾಪಿಸಿ, ಈವರೆಗೆ ಅದನ್ನು ಮುನ್ನಡೆಸಿಕೊಂಡು ಬಂದಿದ್ದಾರೆ. ನನ್ನ ಗುರುಗಳ ಹೆಸರಿನ ಬಳಗದಿಂದ ಮಾಡುತ್ತಿರುವ ಈ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ನನಗೆ ಅತೀವ ಸಂತಸವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ನಗೆಭಾಷಣಕಾರರಾದ ಅನಿಲ ವೈದ್ಯ, ಬಸವರಾಜ ಮಹಾಮನಿ ಮತ್ತು ನರಸಿಂಹ ಜೋಷಿ ತಮ್ಮದೇ ಆದ ವಿಶಿಷ್ಠ ಮಾತುಗಳಿಂದ ಸಭಿಕರನ್ನು ನಗೆಗಡಲಲ್ಲಿ ತೇಲಿಸಿ, ನಗೆಯ ರಸದೌತಣ ಉಣಬಡಿಸಿದರು.

> ಕಾರ್ಯಕ್ರಮ ಉದ್ಘಾಟಿಸಿ ಮಿಥುನ್ ಪಾಟೀಲ ಮಾತನಾಡಿ, ಈ ಪಟ್ಟಣದಲ್ಲಿ ಬೀಚಿ ಬಳಗ ಮಾಡುತ್ತಿರುವ ಸಾಹಿತ್ತಿಕ ಸೇವೆಯನ್ನು ಬಹಳಷ್ಟು ವರ್ಷಗಳಿಂದ ಗಮನಿಸುತ್ತ ಬಂದಿದ್ದೇನೆ. ದಶಮಾನೋತ್ಸವ ಕಾರ್ಯಕ್ರಮಕ್ಕೆ ಕನ್ನಡದ ಪೂಜಾರಿ ಹಿರೇಮಗಳೂರು ಕಣ್ಣನ್ ಅವರನ್ನೇ ನರೇಗಲ್ಲಿಗೆ ಕರೆಯಿಸಿದ ಕೀರ್ತಿ ಬಳಗಕ್ಕಿದೆ. ಬಳಗದ ಯಾವುದೇ ಕಾರ್ಯಕ್ಕೂ ನಮ್ಮ ಬೆಂಬಲ ಇದ್ದೇ ಇದೆ ಎಂದರು.

ಕಾರ್ಯಕ್ರಮದಲ್ಲಿ ಧರ್ಮರತ್ನಾಕರ ಪ್ರಶಸ್ತಿ ಪುರಸ್ಕೃತ ಡಾ. ಜಿ.ಕೆ. ಕಾಳೆ, ಗದಗ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘಕ್ಕೆ ನೂತನವಾಗಿ ಉಪಾಧ್ಯಕ್ಷರಾಗಿ ಆಯ್ಕೆಯಾದ ಡಿ.ಎ. ಅರವಟಗಿಮಠ, ಕಾರ್ಯಕಾರಿಣಿ ಸದಸ್ಯರಾದ ನಿಂಗರಾಜ ಬೇವಿನಕಟ್ಟಿ, ಆದರ್ಶ ಕುಲಕರ್ಣಿ ಮತ್ತು ಕಾನೂನು ಪರೀಕ್ಷೆಯಲ್ಲಿ ರಾಜ್ಯಕ್ಕೆ 7ನೇ ರ್‍ಯಾಂಕ್ ಗಳಿಸಿದ ವಿದ್ಯಾಶ್ರೀ ಬೇವಿನಕಟ್ಟಿಯವರನ್ನು ಸನ್ಮಾನಿಸಲಾಯಿತು.

ಬಣಜಿಗ ಕ್ಷೇಮಾಭಿವೃದ್ಧಿ ಸಂಘದವರು ಮತ್ತು ಶ್ರೀ ಧರ್ಮಸ್ಥಳ ಗುಂಪಿನವರು ಶ್ರೀಗಳು, ಕಲಾವಿದರು, ಗಣ್ಯರನ್ನು ಸನ್ಮಾನಿಸಿದರು. ಬಳಗದ ಅಧ್ಯಕ್ಷ ಶಿವಯೋಗಿ ಜಕ್ಕಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ದಿವ್ಯ ಸಾನ್ನಿಧ್ಯ ವಹಿಸಿದ್ದ ಶ್ರೀ ಮುಪ್ಪಿನ ಬಸವಲಿಂಗ ಸ್ವಾಮೀಜಿ ಆಶೀರ್ವಚನ ನೀಡಿ ಬಳಗದ ಸಾಮಾಜಿಕ ಕಳಕಳಿಯನ್ನು ಎಲ್ಲರೂ ಅರ್ಥ ಮಾಡಿಕೊಳ್ಳಬೇಕು. ಅಂತಾರಾಷ್ಟ್ರೀಯ ಮಟ್ಟದ ಕಲಾವಿದರು ನರೇಗಲ್ಲಿಗೆ ಬರುವುದು ಸಾಮಾನ್ಯ ಮಾತಲ್ಲ. ನಿವೃತ್ತರೇ ಹೆಚ್ಚಾಗಿರುವ ಸಂಘದ ಕ್ರಿಯಾಶೀಲ ಸದಸ್ಯರನ್ನು ಅಭಿನಂದಿಸುತ್ತೇನೆ ಎಂದರು.

ನರೇಗಲ್ಲ ಹಿರೇಮಠದ ಷ.ಬ್ರ.ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯರು ನೇತೃತ್ವ ವಹಿಸಿದ್ದರು. ಕೆ.ಎಸ್. ಕಳಕಣ್ಣವರ ಸ್ವಾಗತಿಸಿದರು. ಬಿ.ಬಿ. ಕುರಿ ಮತ್ತು ಮಹಾದೇವಪ್ಪ ಬೇವಿನಕಟ್ಟಿ ನಿರೂಪಿಸಿದರು. ಎಂ.ಎಸ್. ದಢೇಸೂರಮಠ ಪ್ರಾಸ್ತಾವಿಕ ನುಡಿಗಳನ್ನಾಡಿದರು. ನಿರ್ಮಲಾ ಹಿರೇಮಠ ವಂದಿಸಿದರು.




**ಗದಗ:** ಗದಗ ಜಿಲ್ಲಾ ರೆಡ್ಡಿ ಮಹಿಳಾ ಬಳಗದ ವತಿಯಿಂದ ಮಹಿಳಾ ದೌರ್ಜನ್ಯ ತಡೆ ಕಾರ್ಯಕ್ರಮದನ್ವಯ ಕಳಸಾಪುರ ರಸ್ತೆಯಲ್ಲಿರುವ ಪ್ರೈಮ್ ಸ್ಪೋರ್ಟ್ಸ್ ಪಾರ್ಕ್ ನಲ್ಲಿ ಮಾನವ ಸರಪಳಿ ನಿರ್ಮಿಸುವ ಮೂಲಕ ಮಹಿಳಾ ಜಾಗೃತಿಯ ಅರಿವನ್ನು ಮೂಡಿಸಲಾಯಿತು.

**ರೋಣದ ಸರಕಾರಿ ಶಾಲೆಗಳ 5 ಸಾವಿರ ವಿದ್ಯಾರ್ಥಿಗಳಿಗೆ ಅಕ್ಷರ ಜ್ಞಾನವೇ ಇಲ್ಲ! | ಆಡಳಿತಾಧಿಕಾರಿ ನಂದಾ ಹಣಬರಟ್ಟಿ ಕಳವಳ**

# 13 ಅಂಕಗಳನ್ನು ಪಡೆದರೂ ಎಸ್‌ಎಸ್‌ಎಲ್‌ಸಿ ಪಾಸು!

■ **ವಿಜಯಸಾಕ್ಷಿ ಸುದ್ದಿ, ರೋಣ**

ತಾಲೂಕಿನ ಸರಕಾರಿ ಶಾಲೆಗಳಲ್ಲಿ ಕಲಿಯುತ್ತಿರುವ ಮಕ್ಕಳಲ್ಲಿ ಸುಮಾರು 5 ಸಾವಿರ ಮಕ್ಕಳಿಗೆ ಅಕ್ಷರ ಜ್ಞಾನವೇ ಇಲ್ಲ ಎಂದು ಬಿಇಒ ಅರ್ಜುನ ಕಂಬೋಗಿ ಬೇಸರ ವ್ಯಕ್ತಪಡಿಸಿದರು.

ಅವರು ಶುಕ್ರವಾರ ತಾ.ಪಂ ಸಭಾಭವನದಲ್ಲಿ ತಾ.ಪಂ ಆಡಳಿತಾಧಿಕಾರಿ ನಂದಾ ಹಣಬರಟ್ಟಿ ಅಧ್ಯಕ್ಷತೆಯಲ್ಲಿ ಜರುಗಿದ ಸಾಮಾನ್ಯ ಸಭೆಯಲ್ಲಿ ಭಾಗವಹಿಸಿ ಈ ವಿಷಯವನ್ನು ಪ್ರಸ್ತಾಪಿಸಿದರು.



ಎಸ್‌ಎಸ್‌ಎಲ್‌ಸಿ ಪರೀಕ್ಷಾ ಸುಧಾರಣೆಗೆ ಕೈಗೊಂಡ ಮಾನದಂಡಗಳು, ವಿದ್ಯಾರ್ಥಿಗಳಿಗೆ ಪರೀಕ್ಷಾ ಸಿದ್ಧತೆ ಬಗ್ಗೆ ತಿಳಿಸಿಕೊಟ್ಟಿದ್ದಾರೆಯೇ ಎಂದು ತಾ.ಪಂ ಆಡಳಿತಾಧಿಕಾರಿ ನಂದಾ ಹಣಬರಟ್ಟಿಯವರು ಬಿಇಒರವರಿಗೆ ಪ್ರಶ್ನಿಸಿದರು. ಆಗ ಬಿಇಒ, ಪರೀಕ್ಷಾ ಫಲಿತಾಂಶ ಸುಧಾರಣೆಗೆ ಅಗತ್ಯ ಕ್ರಮ ತೆಗೆದುಕೊಂಡಿದ್ದೇವೆ ಎಂದರು.

ಇಒ ಚಂದ್ರಶೇಖರ ಕಂದಕೂರ, 8 ಮತ್ತು 9ನೇ ವರ್ಗದ ವಿದ್ಯಾರ್ಥಿಗಳಿಗೆ ಹೆಚ್ಚಿನ ಒತ್ತು ಕೊಟ್ಟು ಪರೀಕ್ಷೆಗಳನ್ನು ಎದುರಿಸುವ ಹಾಗೂ ಉತ್ತಮ ಫಲಿತಾಂಶ ಪಡೆಯುವ ಮನೋಸ್ಥೈರ್ಯ ಬೆಳೆಸಬೇಕು. ಮುಖ್ಯವಾಗಿ 9ನೇ ತರಗತಿ ವಿದ್ಯಾರ್ಥಿಗಳಿಗೆ ಕನ್ನಡ ಓದಲು ಬರುತ್ತಿಲ್ಲ ಅಂದರೆ ಇದೆಂಥಾ ಸ್ಥಿತಿ ಎಂದು ಪ್ರಶ್ನಿಸಿದರು. ಆಗ ಬಿಇಒರವರು ಅಕ್ಷರ ಬಾರದೆಯಿರುವ 5 ಸಾವಿರ ಮಕ್ಕಳಿದ್ದಾರೆ. ಅವರ ಸುಧಾರಣೆಗೆ ಆದ್ಯತೆ ನೀಡಲಾಗಿದೆ ಎಂದಾಗ ಮಧ್ಯ ಪ್ರವೇಶಿಸಿದ ಆಡಳಿತಾಧಿಕಾರಿ, ಇದು ಅತ್ಯಂತ ಕಳವಳಕಾರಿ ಸಂಗತಿಯಾಗಿದ್ದು, ಶೈಕ್ಷಣಿಕ ಸುಧಾರಣೆಗೆ ನೋಡಲ್ ಅಧಿಕಾರಿಗಳನ್ನು ನೇಮಿಸುವಂತೆ ತಾ.ಪಂ ಇಒರವರಿಗೆ ಸೂಚಿಸಿದರು.

ಈ ಬಾರಿ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳು 13 ಅಂಕಗಳನ್ನು ಪಡೆದರೆ ಸಾಕು ಅವರು ಪಾಸಾಗುತ್ತಾರೆ. ಕಾರಣ ಎನ್‌ಸಿಆರ್‌ಟಿ ಪ್ರಕಾರ 20 ಅಂಕಗಳನ್ನು ನೀಡುತ್ತಿದ್ದು, ವಿದ್ಯಾರ್ಥಿಗಳು ಕೇವಲ 13 ಅಂಕಗಳನ್ನು ಪಡೆದರೂ ತೇರ್ಗಡೆಯಾಗುತ್ತಾರೆ ಎಂದು ಬಿಇಒರವರು ಸಭೆಗೆ ವಿವರಿಸಿದರು. ನಂತರ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಸಿಡಿಪಿಒ ಬದಲಾಗಿ ಬಂದಿದ್ದ ಮಹಿಳಾ ಸಿಬ್ಬಂದಿಯೊಬ್ಬರು ಸ್ವಂತ ಕಟ್ಟಡ, ಬಾಡಿಗೆ, ಶಾಲೆ, ಸಮುದಾಯ ಭವನಗಳಲ್ಲಿ ಸೇರಿ ಒಟ್ಟು 182 ಅಂಗನವಾಡಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ ಎಂದು ಸಭೆಯ ಗಮನಕ್ಕೆ ತರುತ್ತಿದ್ದಂತೆ ತಾ.ಪಂ ಇಒರವರು, ನೀವು ತಾಲೂಕಿನಲ್ಲಿ 182 ಅಂಗನವಾಡಿ ಕೇಂದ್ರಗಳು ಇವೆ ಎಂದು ವಿವರಿಸುತ್ತೀರಿ. ಆದರೆ ಮಾಹಿತಿಯಲ್ಲಿ 171 ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ ಎಂದಿದೆ, ಹಾಗಾದರೆ ಉಳಿದ 11 ಅಂಗನವಾಡಿ ಕೇಂದ್ರಗಳು ಎಲ್ಲಿ ಎಂದು ಪ್ರಶ್ನಿಸಿದರು.

ಆಡಳಿತಾಧಿಕಾರಿ ನಂದಾ ಹನಬರಟ್ಟಿ, ಇಒ ಚಂದ್ರಶೇಖರ ಕಂದಕೂರ, ಯೋಜನಾಧಿಕಾರಿ ಸಿ.ಎಸ್. ನೋಲಗುಂದ ಸೇರಿದಂತೆ ಅಧಿಕಾರಿಗಳಿದ್ದರು.

ಸಭೆಗೆ ಆಗಮಿಸಿದ್ದ ಪಿಡ್ಬ್ಲುಡಿ ಅಭಿಯಂತರರು ಇಲಾಖೆಯ ಹೆಸರನ್ನು ಬದಲಿಸಿಕೊಂಡು ಪ್ರಗತಿ ವರದಿ ಒಪ್ಪಿಸಲು ಮುಂದಾದರು. ಇದರಿಂದ ಗಲಿಬಿಲಿಗೊಂಡ ಆಡಳಿತಾಧಿಕಾರಿಗಳು ನಿಮ್ಮ ಇಲಾಖೆ ಯಾವುದು ಎಂದು ಅಭಿಯಂತರರನ್ನು ಪ್ರಶ್ನಿಸಿ, ನೀವು ಕೊಟ್ಟಿರುವ ವರದಿ ಸಂಪರ್ಕ ಮತ್ತು ಕಟ್ಟಡ ನಿರ್ಮಾಣ ಇಲಾಖೆ ಎಂದಿದೆ. ನೆಪ ಹೇಳಲು ಇಲಾಖೆಯ ಹೆಸರನ್ನೇ ಬದಲಿಸುತ್ತೀರಾ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಕೃಷಿ ಇಲಾಖೆ ಅಧಿಕಾರಿ ಎಸ್.ಎಫ್. ತಹಸೀಲ್ದಾರ ಬಿಡುಗಡೆಯಾದ ಅನುದಾನದ ಬಗ್ಗೆ ವಿವರಿಸದೆ ಖರ್ಚು ಮಾಡಿದ ವಿವರವನ್ನು ಮಾತ್ರ ಸಭೆಯ ಗಮನಕ್ಕೆ ತರುತ್ತಿರುವುದನ್ನು ಗಮನಿಸಿದ ಆಡಳಿತಾಧಿಕಾರಿಗಳು, ಸರಕಾರ ಇಲಾಖೆಗೆ ಅನುದಾನ ಕೊಟ್ಟಿದೆಯೆಂದಾದರೆ, ಬಿಡುಗಡೆಗೊಂಡ ಅನುದಾನದ ಮಾಹಿತಿ ಏಕಿಲ್ಲ ಎನ್ನುತ್ತಿದ್ದಂತೆ ಪೇಚಿಗೆ ಸಿಲುಕಿದ ಅಧಿಕಾರಿಗಳು ಮುಂದಿನ ಸಭೆಗೆ ತರುವುದಾಗಿ ನುಣುಚಿಕೊಂಡರು.

## ಗೋವಿನಜೋಳ ಖರೀದಿ ಆರಂಭ



■ **ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಟಿಎಪಿಪಿಎಂಎಸ್‌ನಲ್ಲಿ ಶುಕ್ರವಾರ ಸರ್ಕಾರದ ಬೆಂಬಲ ಬೆಲೆಯಡಿಯಲ್ಲಿ ಗೋವಿನಜೋಳ ಖರೀದಿ ಪ್ರಕ್ರಿಯೆ ಪ್ರಾರಂಭಿಸಲಾಯಿತು.

ಟಿಎಪಿಪಿಎಂಎಸ್ ಅಧ್ಯಕ್ಷ ಅಧ್ಯಕ್ಷ ಸೋಮಣ್ಣ ಉಪನಾಳ ಚಾಲನೆ ನೀಡಿ ಮಾತನಾಡಿ, ಮುಕ್ತ ಮಾರುಕಟ್ಟೆಯಲ್ಲಿ ಗೋವಿನಜೋಳದ ಬೆಲೆ ಕುಸಿತ ಕಂಡಿದ್ದರಿಂದ ರೈತರು ಬೆಂಬಲ ಬೆಲೆಯಡಿ ಖರೀದಿಸಬೇಕು ಎಂದು ಹೋರಾಟ ಮಾಡಿದ್ದರು. ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿದ ಸರ್ಕಾರ ಪ್ರತಿ ಕ್ವಿಂಟಲ್‌ಗೆ 2400 ರೂ ಬೆಂಬಲ ಬೆಲೆಯಡಿ ಖರೀದಿಗೆ ಮುಂದಾಗಿದೆ. ಮುಂಗಾರಿನ ಬೆಳೆ ನಷ್ಟದಲ್ಲಿದ್ದ ರೈತರಿಗೆ ಗೋವಿನಜೋಳವನ್ನು ಬೆಂಬಲ ಬೆಲೆಯಡಿ ಖರೀದಿಸುತ್ತಿರುವುದು ಸಂತಸ ತಂದಿದೆ. ನೋಂದಣಿಯೊಂದಿಗೆ ಖರೀದಿ ಪ್ರಕ್ರಿಯೆಯನ್ನು ಲಕ್ಷ್ಮೇಶ್ವರದ ಎಪಿಎಂಸಿ ಪ್ರಾಂಗಣದ ಗೋಡಾನ್‌ನಲ್ಲಿ ತೆಗೆದುಕೊಳ್ಳಲಾಗುತ್ತಿದೆ. ರೈತರು ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಹೇಳಿದರು.

ಈ ವೇಳೆ ಉಪಾಧ್ಯಕ್ಷ ಶೇಖಣ್ಣ ಕಾಳೆ, ಸದಸ್ಯರಾದ ವಿರೂಪಾಕ್ಷಪ್ಪ ಪಡಿಗೇರಿ, ಸುನೀಲ ಮಹಾಂತಶೆಟ್ಟರ, ವೀರಭದ್ರಪ್ಪ ಶಿಗ್ಲಿ, ಈರಣ್ಣ ಮುಳಗುಂದ, ಜಯಕ್ಕ ಕಳ್ಳಿ, ರತ್ನಾ ಗುಂಜಳ ಸೇರಿ ರೈತರು ಇದ್ದರು.



ಬೌದ್ಧ ಧರ್ಮಗುರು ದಲೈ ಲಾಮಾ ಅವರು ಶುಕ್ರವಾರ ಬೆಳಿಗ್ಗೆ ಹುಬ್ಬಳ್ಳಿ ವಿಮಾನ ನಿಲ್ದಾಣಕ್ಕೆ ಆಗಮಿಸಿದ ಸಂದರ್ಭದಲ್ಲಿ ರಾಜ್ಯ ಸರಕಾರದ ಪರವಾಗಿ ಧಾರವಾಡ ಜಿಲ್ಲಾಧಿಕಾರಿ ದಿವ್ಯ ಪ್ರಭು ಸ್ವಾಗತಿಸಿದರು. ಈ ಸಂದರ್ಭದಲ್ಲಿ ಮಹಾನಗರ ಪೊಲೀಸ್ ಆಯುಕ್ತರಾದ ಎನ್. ಶಶಿಕುಮಾರ್, ಡಿಸಿಪಿ ಮಾನಿಂಗ ನಂದಗಾವಿ, ಉಪವಿಭಾಗಾಧಿಕಾರಿ ಶಾಲಂ ಹುಸೇನ್, ಹುಬ್ಬಳ್ಳಿ ಶಹರ ತಹಸೀಲ್ದಾರ ಮಹೇಶ ಗಸ್ತಿ, ಕಂದಾಯ ನಿರೀಕ್ಷಕ ರವಿ ಬೆನ್ನೂರ ಮುಂತಾದವರು ಉಪಸ್ಥಿತರಿದ್ದರು.

## ನಿವೃತ್ತಿ ನಿರ್ಧಾರ ಹಿಂತೆಗೆದುಕೊಂಡ ವಿನೇಶ್ ಫೋಗಟ್; ಲಾಸ್ ಏಂಜಲೀಸ್ ಒಲಿಂಪಿಕ್ಸ್‌ಗೆ ತಯಾರಿ

■ **ವಿಜಯಸಾಕ್ಷಿ ಸುದ್ದಿ, ನವದೆಹಲಿ**




ಕುಸ್ತಿಪಟು ವಿನೇಶ್ ಫೋಗಟ್ ಸ್ಪರ್ಧಾತ್ಮಕ ಕ್ರೀಡೆಗೆ ಮರಳುವುದಾಗಿ ಘೋಷಿಸುವ ಮೂಲಕ ತಮ್ಮ ನಿವೃತ್ತಿ ನಿರ್ಧಾರವನ್ನು ಹಿಂತೆಗೆದುಕೊಂಡಿದ್ದಾರೆ. 2028 ರ ಲಾಸ್ ಏಂಜಲೀಸ್ ಒಲಿಂಪಿಕ್ಸ್ ಅನ್ನು ಗುರಿಯಾಗಿಸಿಕೊಂಡಿರುವುದಾಗಿ ತಿಳಿಸಿದ್ದಾರೆ.

ಈ ಕುರಿತ ಹೇಳಿಕೆ ಬಿಡುಗಡೆ ಮಾಡಿರುವ ಜುಲಾನಾ ಕ್ಷೇತ್ರದ ಶಾಸಕಿಯೂ ಆಗಿರುವ ಕುಸ್ತಿಪಟು ವಿನೇಶ್, 2024 ರ ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿ ನಾಟಕೀಯ ಅನರ್ಹತೆಯ ನಂತರ ಕುಸ್ತಿಯನ್ನು ತ್ಯಜಿಸಿದ 18 ತಿಂಗಳ ನಂತರ ಅವರ ಘೋಷಣೆ ಬಂದಿದೆ.

ಚಿನ್ನದ ಪದಕ ಗೆಲ್ಲುವ ಸ್ಪರ್ಧೆಯ ದಿನದಂದು ಅವರ ದೇಹದಲ್ಲಿನ ಅಧಿಕ ತೂಕದಿಂದಾಗಿ 50 ಕೆಜಿ ಫ್ರೀಸ್ಟೈಲ್ ಫೈನಲ್‌ನಿಂದ ಅನರ್ಹಗೊಂಡಿದ್ದರು. ನಂತರ, ಅವರು ಆಗಸ್ಟ್ 8, 2024 ರಂದು ತಮ್ಮ ನಿವೃತ್ತಿ ನಿರ್ಧಾರ ಘೋಷಿಸಿದರು. ಕ್ಯೂಬಾದ ಯುಸ್ನಿಲಿಸ್ ಗುಜ್ಮಾನ್ ಲೋಪೆಜ್ ವಿರುದ್ಧ 5-0 ಅಂತರದ ಪ್ರಬಲ ಗೆಲುವಿನ ನಂತರ ಅವರು ಫೈನಲ್ ತಲುಪಿದ್ದರು. ಕೊನೆಯ ನಿಮಿಷದ ಹಿನ್ನಡೆ ಅವರ ಪದಕದ ಭರವಸೆಯನ್ನು ಕೊನೆಗೊಳಿಸುವ ಮೊದಲು ಯುನೈಟೆಡ್ ಸ್ಟೇಟ್ಸ್‌ನ ಸಾರಾ ಆನ್ ಹಿಲ್ಡೆಬ್ರಾಂಡ್ ಅವರನ್ನು ಎದುರಿಸಲು ಸಿದ್ಧರಾಗಿದ್ದರು.

ಶುಕ್ರವಾರ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ ಅವರು, ನನ್ನ ಪ್ರಯಾಣವನ್ನು ಅರ್ಥಮಾಡಿಕೊಳ್ಳಲು ಒತ್ತಡ ಮತ್ತು ನಿರೀಕ್ಷೆಗಳಿಂದ ದೂರವಿರಲು ಸಮಯ ಬೇಕಾಗುತ್ತದೆ ಎಂದು ಹೇಳಿದರು.

## ಡಿ.17ರಂದು ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ

■ **ವಿಜಯಸಾಕ್ಷಿ ಸುದ್ದಿ, ಗದಗ**

17.12.2025(ಬುಧವಾರ)ರಂದು 110 ಕೆವ್ಹಿ ಗದಗ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಕೈಗೊಳ್ಳುವುದರಿಂದ ಮುಂಜಾನೆ 10:00 ಗಂಟೆಯಿಂದ ಸಾಯಂಕಾಲ 05.30 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗುತ್ತದೆ. ಸದರಿ ಉಪ ಕೇಂದ್ರಗಳಿಂದ ಪೂರೈಕೆಯಾಗುವ ಜಿಮ್ಸ್ ಆಸ್ಪತ್ರೆ, ಕುಡಿಯುವ ನೀರಿನ ಸ್ಥಾವರಗಳು, 33 ಕೆವ್ಹಿ ಐ.ಪಿಪಿ--ಕೆ.ಪಿ.ಸಿ.ಎಲ್, ನಾಗಾವಿ, ಮಲ್ಲಸಮುದ್ರ, ಪಯೋನಿರ್, ಟಿ.ಡಿ.ಪಿ ಎಲ್ 1, ಮತ್ತು 2, 33 ಕೆವಿ ಉಪಕೇಂದ್ರ--ಹುಲಕೋಟಿ, ಲಕ್ಕುಂಡಿ, ಕೆ.ಎಚ್.ಬಿ ಹಾಗೂ ಎಲ್ಲಾ 11 ಕೆವ್ಹಿ ನಗರ, ಗ್ರಾಮೀಣ, ಕೈಗಾರಿಕಾ, ಸೋಲಾರ್ ಐ.ಪಿ.ಪಿ, ಮತ್ತು ನೀರಾವರಿ ಪಂಪಸೆಟ್ಟಗಳ ವಿದ್ಯುತ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಸಾರ್ವಜನಿಕರು ಕಂಪನಿಯೊಂದಿಗೆ ಸಹಕರಿಸಬೇಕೆಂದು ಪ್ರಕಟಣೆ ತಿಳಿಸಿದೆ.

## ಸಾರ್ವಜನಿಕರ ಗಮನಕ್ಕೆ

■ **ವಿಜಯಸಾಕ್ಷಿ ಸುದ್ದಿ, ಗದಗ**

ಸಮುದಾಯ ಮಾನಸಿಕ ಆರೋಗ್ಯ ಹಗಲು ಆರೋಗ್ಯ ಕೇಂದ್ರ (ಮಾನಸಧಾರ) ಮಾನಸಿಕ ರೋಗಿಗಳ ಪುನಶ್ಚೇತನಕ್ಕೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಗದಗ ವತಿಯಿಂದ ಡೇಕೇರ್ ಸೆಂಟರ್ (ಮಾನಸದಾರ) ಕೇಂದ್ರವನ್ನು ಸ್ಥಾಪಿಸಲು ಆಸಕ್ತಿಯ ಅಭಿವ್ಯಕ್ತಿ ಆಹ್ವಾನಿಸಿದ್ದು, ಜಿಲ್ಲೆಯ ಅರ್ಹ ಮತ್ತು ಅನುಭವ ಸರ್ಕಾರೇತರ ಸ್ವಯಂ ಸೇವಾ ಸಂಸ್ಥೆಗಳಿಂದ ಕೆ.ಟಿ.ಟಿ.ಪಿ ನಿಯಾಮನುಸಾರ ಆಸಕ್ತಿಯ ಅಭಿವ್ಯಕ್ತಿ ಆಹ್ವಾನಿಸಲಾಗಿದೆ.

ಆಸಕ್ತ ಸ್ವಯಂ ಸೇವಾ ಸಂಸ್ಥೆಗಳ ಅಧಿಸೂಚನೆ ಮತ್ತು ಅರ್ಜಿ ಸಲ್ಲಿಸಲು ವಿವರಗಳನ್ನು www.kppp.karnataka.gov.in ವೆಬ್‌ಸೈಟ್‌ನಲ್ಲಿ ಪಡೆಯಬಹುದು. ದಿ. 11/12/2025 ರಿಂದ 19/12/2025ರ ಸಂಜೆ 4:00 ಗಂಟೆಯೊಳಗೆ ಅಗತ್ಯ ಮಾಹಿತಿಯೊಂದಿಗೆ ಆಪ್‌ಲೋಡ್ ಮಾಡತಕ್ಕದ್ದು. ಹಾಗೂ ಸಂಬಂಧಿಸಿದ ಎನ್.ಜಿ.ಓ ಸಂಸ್ಥೆಯವರು ಅಧಿಸೂಚನೆಯಲ್ಲಿ ತಿಳಿಸಿರುವಂತೆ ದಿನಾಂಕ: 22/12/2025, ರಂದು ಬೆಳಗ್ಗೆ 11:00ಕ್ಕೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿಯಲ್ಲಿ ಮೂಲ ದಾಖಲೆಗಳೊಂದಿಗೆ ಪರಿಶೀಲನೆಗಾಗಿ ಖುದ್ದಾಗಿ ಹಾಜರಾಗತಕ್ಕದ್ದು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ಗದಗ ಇವರನ್ನು ಸಂಪರ್ಕಿಸಬಹುದಾಗಿದೆ.

## ಡಿ. 17ರಂದು ವಿದ್ಯುತ್ ವ್ಯತ್ಯಯ

■ **ವಿಜಯಸಾಕ್ಷಿ ಸುದ್ದಿ, ಗದಗ**

110 ಕೆವ್ಹಿ ಗದಗ ವಿದ್ಯುತ್ ವಿತರಣಾ ಕೇಂದ್ರದಲ್ಲಿ ಡಿ. 17ರಂದು ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಕೈಗೊಳ್ಳುವುದರಿಂದ ಮುಂಜಾನೆ 10 ಗಂಟೆಯಿಂದ ಸಾಯಂಕಾಲ 5.30 ಗಂಟೆಯುವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗುತ್ತದೆ.

ಸದರಿ ಉಪಕೇಂದ್ರಗಳಿಂದ ಪೂರೈಕೆಯಾಗುವ ಜಿಮ್ಸ್ ಆಸ್ಪತ್ರೆ, ಕುಡಿಯುವ ನೀರಿನ ಸ್ಥಾವರಗಳು, 33 ಕೆವ್ಹಿ ಐ.ಪಿಪಿ-ಕೆ.ಪಿ.ಸಿ.ಎಲ್, ನಾಗಾವಿ, ಮಲ್ಲಸಮುದ್ರ, ಪಯೋನಿರ್, ಟಿ.ಡಿ.ಪಿ ಎಲ್ 1 ಮತ್ತು 2, 33 ಕೆವಿ ಉಪಕೇಂದ್ರ-ಹುಲಕೋಟಿ, ಲಕ್ಕುಂಡಿ, ಕೆ.ಎಚ್.ಬಿ ಹಾಗೂ ಎಲ್ಲಾ 11 ಕೆವ್ಹಿ ನಗರ, ಗ್ರಾಮೀಣ, ಕೈಗಾರಿಕಾ, ಸೋಲಾರ್ ಐ.ಪಿ.ಪಿ ಮತ್ತು ನೀರಾವರಿ ಪಂಪ್‌ಸೆಟ್‌ಗಳ ವಿದ್ಯುತ್ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಕಾರಣ ಸಾರ್ವಜನಿಕರು ಸದರಿ ಪ್ರಕಟಣೆ ಗಮನಿಸಿ ಕಂಪನಿಯೊಂದಿಗೆ ಸಹಕರಿಸಬೇಕಾಗಿ ಹೆಸ್ಕಾಂ ಪ್ರಕಟಣೆ ತಿಳಿಸಿದೆ.

## ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳ ಮನೆಗೆ ಭೇಟಿ



■ **ವಿಜಯಸಾಕ್ಷಿ ಸುದ್ದಿ, ಹೊಂಬಳ**

ಜಿಲ್ಲೆಯ ಎಸ್‌ಎಸ್‌ಎಲ್‌ಸಿ ಫಲಿತಾಂಶ ಸುಧಾರಣೆಯ ಹಿನ್ನೆಲೆಯಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಎಸ್.ಆರ್. ಬುರಡಿ ಅವರ ನೇತೃತ್ವದಲ್ಲಿ ಹೊಂಬಳ ಗ್ರಾಮದ ಶ್ರೀ ಶಂಕರಲಿಂಗ ಪ್ರೌಢಶಾಲೆಯ ವಿದ್ಯಾರ್ಥಿಗಳ ಮನೆ ಮನೆ ಭೇಟಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಉಪನಿರ್ದೇಶಕರು ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳು ವಿದ್ಯಾರ್ಥಿಗಳ ಅಧ್ಯಯನ ಕ್ರಮ ಪರಿಶೀಲಿಸಿ ಮಾರ್ಗದರ್ಶನ ಮಾಡಿದರು.

ಈ ವೇಳೆ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡುವಿನಮನಿ ವಿದ್ಯಾರ್ಥಿಗಳಿಗೆ ಓದುವಂತೆ ಪ್ರೇರೇಪಿಸುವುದರೊಂದಿಗೆ ಶಾಲೆಯನ್ನು ತಪ್ಪಿಸದಂತೆ ತಿಳಿವಳಿಕೆ ನೀಡಿ ವಿದ್ಯಾರ್ಥಿಗಳಲ್ಲಿ ಆತ್ಮಸ್ಥೈರ್ಯ ತುಂಬಿದರು.

ಕಾರ್ಯಕ್ರಮದಲ್ಲಿ ಶ್ರೀ ಶಂಕರಲಿಂಗ ಪ್ರೌಢಶಾಲೆಯ ಶಾಲಾ ಸುಧಾರಣಾ ಸಮಿತಿ ಅಧ್ಯಕ್ಷರು, ಮುಖ್ಯಾಧ್ಯಾಪಕರಾದ ಸುನೀಲ್ ಅಂಬೇಕರ್, ಸಿಬ್ಬಂದಿ ವರ್ಗದವರು, ಶಾಲಾ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಉಪ ನಿರ್ದೇಶಕರನ್ನು ಪಾಲಕರು ಸಂತೋಷದಿಂದ ಬರಮಾಡಿಕೊಂಡು ತಮ್ಮ ಮಕ್ಕಳನ್ನು ಶಾಲೆಗೆ ತಪ್ಪದೇ ಕಳುಹಿಸುವುದರೊಂದಿಗೆ ಚೆನ್ನಾಗಿ ಓದಿಸುತ್ತೇವೆ ಎಂದು ಭರವಸೆ ನೀಡಿದರು.

**ಆಲೂರು ವೆಂಕಟರಾವ ಭವನದಲ್ಲಿ ಜಿಲ್ಲಾಮಟ್ಟದ ಕಲಾಪ್ರತಿಭೋತ್ಸವ ಕಾರ್ಯಕ್ರಮ**

# ಯುವ ಪ್ರತಿಭೆಗಳ ಸಾಮರ್ಥ್ಯ ಅನಾವರಣ

■ **ವಿಜಯಸಾಕ್ಷಿ ಸುದ್ದಿ, ಧಾರವಾಡ**




ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಜಿಲ್ಲಾಮಟ್ಟದ ಕಲಾಪ್ರತಿಭೋತ್ಸವ-2025ರ ವಿವಿಧ ಕಲಾ ಪ್ರಕಾರಗಳಲ್ಲಿ ಬಾಲ ಪ್ರತಿಭೆ, ಕಿಶೋರ ಪ್ರತಿಭೆ ಮತ್ತು ಯುವ ಪ್ರತಿಭೆಗಳ ಸ್ಪರ್ಧೆಗಳ ಉದ್ಘಾಟನಾ ಕಾರ್ಯಕ್ರಮವನ್ನು ಕರ್ನಾಟಕ ಕುಲಪುರೋಹಿತ ಆಲೂರ ವೆಂಕಟರಾವ ಸಾಂಸ್ಕೃತಿಕ ಭವನದಲ್ಲಿ ನಡೆಸಲಾಯಿತು.

ಹುಬ್ಬಳ್ಳಿ-ಧಾರವಾಡ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಶಾಕೀರ ಸನದಿ ಕಾರ್ಯಕ್ರಮ ಉದ್ಘಾಟಿಸಿದರು. ಉದ್ಘಾಟನಾ ಕಾರ್ಯಕ್ರಮದಲ್ಲಿ ಮಾಜಿ ಸಂಸದ ಆಯ್.ಜಿ. ಸನದಿ, ಕನ್ನಡ ಸಾಹಿತ್ಯ ಪರಿಷತ್ತು ಅಧ್ಯಕ್ಷ ಡಾ. ಲಿಂಗರಾಜ ಅಂಗಡಿ, ಕರ್ನಾಟಕ ಕುಲಪುರೋಹಿತ ಆಲೂರ ವೆಂಕಟರಾವ ರಾಷ್ಟ್ರೀಯ ಸ್ಮಾರಕ ಟ್ರಸ್ಟ್ ಅಧ್ಯಕ್ಷ ಡಾ. ರಂಜಾನ ದರ್ಗಾ, ಚಿತ್ರಕಲಾ ಶಿಲ್ಪಿ ಡಿ.ವಿ. ಹಾಲಭಾವಿ ರಾಷ್ಟ್ರೀಯ ಸ್ಮಾರಕ ಟ್ರಸ್ಟ್ ಅಧ್ಯಕ್ಷ ಬಿ. ಮಾರುತಿ, ಟ್ರಸ್ಟ್ ಸದಸ್ಯ ಡಾ. ಬಿ.ಎಚ್. ಕುರಿಯವರ, ರಂಗಾಯಣ ಆಡಳಿತಾಧಿಕಾರಿ ಶಶಿಕಲಾ ಹುಡೇದ ಉಪಸ್ಥಿತರಿದ್ದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಕುಮಾರ ಬೆಕ್ಕೇರಿ ಸ್ವಾಗತಿಸಿದರು.

ಧಾರವಾಡ ರಂಗಾಯಣದ ಸುವರ್ಣ ಸಾಂಸ್ಕೃತಿಕ ಸಮುಚ್ಚಯ ಭವನದಲ್ಲಿ ಬಾಲ, ಕಿಶೋರ ಮತ್ತು ಯುವ ಪ್ರತಿಭೆಗಳ ಸುಗಮ ಸಂಗೀತ ಸ್ಪರ್ಧೆ, ಯುವ ಪ್ರತಿಭೆಗಳ ನನ್ನ ಮೆಚ್ಚಿನ ಸಾಹಿತಿ ಆಶು ಭಾಷಣ ಸ್ಪರ್ಧೆ ಹಾಗೂ ಯುವ ಪ್ರತಿಭೆಗಳ ನಾಟಕ ಸ್ಪರ್ಧೆಗಳನ್ನು ಆಯೋಜಿಸಲಾಗಿತ್ತು.

ಬಾಲ, ಕಿಶೋರ ಹಾಗೂ ಯುವ ಪ್ರತಿಭೆಗಳ ಸುಗಮ ಸಂಗೀತ ಸ್ಪರ್ಧೆಯ ತೀರ್ಪುಗಾರರಾಗಿ ಆರತಿ ಪಾಟೀಲ, ಶ್ರೀಕಾಂತ ಬಾಕಳೆ, ಹಾಗೂ ಭಾರ್ಗವಿ ಕುಲಕರ್ಣಿ ಅವರು ಭಾಗವಹಿಸಿದ್ದರು. ಯುವ ಪ್ರತಿಭೆಗಳ ಆಶು ಭಾಷಣ ಸ್ಪರ್ಧೆಯ ತೀರ್ಪುಗಾರರಾಗಿ ಡಾ. ಈರಣ್ಣ ಇಂಜಗನೇರಿ, ಸಂಗಮೇಶ ಹಡಪದ ಹಾಗೂ ಡಾ. ದುಂಡಪ್ಪ ನಾಂದ್ರೆ ಇದ್ದರು. ಯುವ ಪ್ರತಿಭೆಗಳ ನಾಟಕ ಸ್ಪರ್ಧೆಯ ತೀರ್ಪುಗಾರರಾಗಿ ಬಿ.ಆಯ್. ಈಳಗೇರ, ಎನ್. ರಾಜೇಶ್ವರಿ ಸುಳ್ಯ ಹಾಗೂ ವಿಜಯೇಂದ್ರ ಅರ್ಚಕ್ ಭಾಗವಹಿಸಿದ್ದರು. ಸರ್ಕಾರಿ ಚಿತ್ರಕಲಾ ಮಹಾವಿದ್ಯಾಲಯದಲ್ಲಿ ಬಾಲ, ಕಿಶೋರ ಮತ್ತು ಯುವ ಪ್ರತಿಭೆಗಳ ಚಿತ್ರಕಲಾ ಸ್ಪರ್ಧೆಗಳು ಜರುಗಿದವು.

ಕರ್ನಾಟಕ ಕುಲಪುರೋಹಿತ ಆಲೂರ ವೆಂಕಟರಾವ ಸಾಂಸ್ಕೃತಿಕ ಭವನದಲ್ಲಿ ಬಾಲ ಪ್ರತಿಭೆಗಳ ಶಾಸ್ತ್ರೀಯ ನೃತ್ಯ ಸ್ಪರ್ಧೆಗಳು ಜರುಗಿದವು. ಬಾಲ ಪ್ರತಿಭೆಗಳ ಶಾಸ್ತ್ರೀಯ ನೃತ್ಯ ಸ್ಪರ್ಧೆಯ ತೀರ್ಪುಗಾರರಾಗಿ ಮಧುರಾ ಗಾವಡೆ, ಮಾಧವಿ ಡಿ.ಕೆ ಹಾಗೂ ವಿದುಷಿ ಸವಿತಾ ಹೆಗಡೆ ಕಾರ್ಯನಿರ್ವಹಿಸಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka